ಸಂಪುಟ : 9 ಸಂಚಿಕೆ 277 ಪುಟ : 4 ಬೆಲೆ: 3.00 ರವಿವಾರ ಡಿಸೆಂಬರ್ 15 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 9 Issue : 277 Pages : 4 Price : 3.00 Sunday December 15 2024 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

ರೋಣದಲ್ಲಿಂದು ವಿವಿಧ ಅಭಿವೃದ್ಧಿ ಕಾರ್ಯಕ್ರಮಗಳ ಶಂಕುಸ್ಥಾಪನೆ, ಉದ್ಘಾಟನಾ ಸಮಾರಂಭ । 50 ಸಾವಿರ ಜನ ಸೇರುವ ನಿರೀಕ್ಷೆ । 35 ಸಾವಿರ ಆಸನಗಳ ವ್ಯವಸ್ಥೆ

# ಮುಖ್ಯಮಂತ್ರಿಗಳ ಆಗಮನಕ್ಕೆ ಕ್ಷಣಗಣನೆ

**■ವಿಜಯಸಾಕ್ಷಿ ಸುದ್ದಿ, ರೋಣ**

ರೋಣ ಮತಕ್ಷೇತ್ರದಲ್ಲಿ 200 ಕೋಟಿ ರೂಗಳ ವೆಚ್ಚದಲ್ಲಿ ಜರುಗುತ್ತಿರುವ ವಿವಿಧ ಅಭಿವೃದ್ಧಿ ಕಾರ್ಯಕ್ರಮಗಳ ಶಂಕುಸ್ಥಾಪನೆ ಹಾಗೂ ಉದ್ಘಾಟನಾ ಸಮಾರಂಭಕ್ಕೆ ಕ್ಷಣಗಣನೆ ಆರಂಭವಾಗಿದ್ದು, ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಹಲವು ಸಚಿವರು, ಮುಖಂಡರ ಆಗಮನದ ಹಿನ್ನೆಲೆಯಲ್ಲಿ ಅಂತಿಮ ಹಂತದ ಸಿದ್ಧತೆಗಳು ಭರದಿಂದ ಸಾಗುತ್ತಿವೆ.

ಡಿ.15ರಂದು ಬೆಳಿಗ್ಗೆ 11.30ಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ರೋಣ ಮತಕ್ಷೇತ್ರದ ಹರ್ಲಾಪೂರ ಗ್ರಾಮದಿಂದ ಹೆಲಿಕ್ಯಾಪ್ಟರ್ ಮೂಲಕ ರೋಣ ಪಟ್ಟಣದ ಡಿ'ಪೌಲ್ ಶಾಲಾ ಆವರಣಕ್ಕೆ ಅಗಮಿಸಲಿದ್ದು, ಅಲ್ಲಿಂದ ನೇರವಾಗಿ ಸಮಾವೇಶ ನಡೆಯುವ ಸ್ಥಳವಾದ ತಾಲೂಕಾ ಕ್ರೀಡಾಂಗಣಕ್ಕೆ ಬರಲಿದ್ದಾರೆ. ಇವರೊಂದಿಗೆ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ, ಸಚಿವರಾದ ಬೈರತಿ ಸುರೇಶ, ಜಮೀರ್ ಅಹ್ಮದ ಖಾನ್, ಲಕ್ಷ್ಮೀ ಹೆಬ್ಬಾಳ್ಕರ್, ಸತೀಶ ಜಾರಕಿಹೊಳಿ, ಲಕ್ಷ್ಮಣ ಸವದಿ, ಸಲೀಮ ಅಹ್ಮದ ಸೇರಿದಂತೆ ಅನೇಕ ಸಚಿವರು, ಶಾಸಕರು, ಲೋಕಸಭಾ ಸದಸ್ಯರು, ವಿಧಾನಪರಿಷತ್ ಸದಸ್ಯರು



ಆಗಮಿಸಲಿದ್ದು, ನಿರೀಕ್ಷೆ ಮೀರಿ ಜನ ಸೇರಬಹುದು ಎಂದು ಅಂದಾಜಿಸಲಾಗಿದೆ.

ಈ ಮೊದಲು ನಿರೀಕ್ಷೆ ಮಾಡಿದಂತೆ 50 ಸಾವಿರಕ್ಕೂ ಹೆಚ್ಚು ಜನರು ಸೇರಬಹುದು ಎಂಬ ಅಂದಾಜನ್ನು ಇಟ್ಟುಕೊಂಡು ಬೃಹತ್ ಪೆಂಡಾಲ್ ಹಾಕಲಾಗಿದೆ. 35 ಸಾವಿರ ಆಸನದ ವ್ಯವಸ್ಥೆಯನ್ನು ಮಾಡಲಾಗಿದೆ. ಅಲ್ಲದೆ, ಸಮಾವೇಶಕ್ಕೆ ಬರುವ ಜನರಿಗೆ 30 ಪ್ರತ್ಯೇಕ ಕೌಂಟರ್‌ಗಳನ್ನು ನಿರ್ಮಿಸಿ ಊಟದ ವ್ಯವಸ್ಥೆಯನ್ನು ಕಲ್ಪಿಸಲಾಗಿದ್ದು, ಶುದ್ಧ ಕುಡಿಯುವ ನೀರು ಪೂರೈಕೆಗೂ ಕ್ರಮ ವಹಿಸಲಾಗಿದೆ.

ಮುಖ್ಯವಾಗಿ ರಾಜ್ಯ ಸರಕಾರ ಜಾರಿಗೆ ತಂದಿರುವ ಗ್ಯಾರಂಟಿ ಯೋಜನೆಗಳು ಸೇರಿದಂತೆ ವಿವಿಧ ಇಲಾಖೆಯ ಯೋಜನೆಗಳ ಕುರಿತು ಮಾಹಿತಿ ನೀಡಲು 20ಕ್ಕೂ ಹೆಚ್ಚು ಸ್ಟಾಲ್‌ಗಳನ್ನು ನಿರ್ಮಿಸಲಾಗಿದೆ. ಜಿಲ್ಲಾಡಳಿತ ಹಾಗೂ ತಾಲೂಕಾಡಳಿತ ಸ್ಥಳದಲ್ಲಿಯೇ ಬಿಡಾರ ಹೂಡಿದ್ದು, ಮುನ್ನೆಚ್ಚರಿಕೆಯ ಕ್ರಮಗಳನ್ನು ಕೈಗೊಂಡಿದ್ದಾರೆ. ಒಟ್ಟಿನಲ್ಲಿ, ಮುಖ್ಯಮಂತ್ರಿಗಳು ಆಗಮಿಸುತ್ತಿರುವ ಹಿನ್ನೆಲೆಯಲ್ಲಿ ರಂಗೋಲಿಯ ಚಿತ್ತಾರಗಳು ವೇದಿಕೆಯ ಎದುರು ಸಿದ್ಧವಾಗುತ್ತಿದೆ.


> 200 ಕೋಟಿ ರೂ ವೆಚ್ಚದ ಅಭಿವೃದ್ಧಿ ಕಾರ್ಯಕ್ರಮಗಳ ಈ ಸಮಾವೇಶ ಐತಿಹಾಸಿಕ ಸಮಾವೇಶವಾಗಿದೆ. ನಮ್ಮ ನಿರೀಕ್ಷೆಗಿಂತಲೂ ಹೆಚ್ಚಿನ ಜನರು ಸೇರಲಿದ್ದು, ರಾಜ್ಯದ ಸರಕಾರದ ಗ್ಯಾರಂಟಿ ಯೋಜನೆಗಳ ಜೊತೆಗೆ ಅಭಿವೃದ್ಧಿ ಕಾರ್ಯಗಳನ್ನು ಮೆಚ್ಚಿ ನಾಗರಿಕ ಸಮುದಾಯ ಸಮಾವೇಶಕ್ಕೆ ಸ್ವಯಂ ಪ್ರೇರಣೆಯಿಂದ ಬರಲಿದ್ದಾರೆ.
>
> **– ಸಂಗನಗೌಡ (ಮಿಥುನ್)ಪಾಟೀಲ,**
> **ವ್ಹಿ.ಆರ್. ಗುಡಿಸಾಗರ, ಹಿರಿಯ ಮುಖಂಡರು.**

## ವಿವಿಧ ಕಾಮಗಾರಿಗಳ ಉದ್ಘಾಟನೆ ಇಂದು

**■ವಿಜಯಸಾಕ್ಷಿ ಸುದ್ದಿ, ರೋಣ**

ಡಿ.15ರಂದು ರೋಣ ಮತಕ್ಷೇತ್ರದ ಅಭಿವೃದ್ಧಿ ಕಾರ್ಯಕ್ರಮಗಳ ಶಂಕುಸ್ಥಾಪನೆ ಹಾಗೂ ವಿವಿಧ ಕಾಮಗಾರಿಗಳ ಉಧ್ಘಾಟನಾ ಸಮಾರಂಭ ನೆರವೇರಲಿದ್ದು, ಈ ಸಮಾರಂಭಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ ಸೇರಿದಂತೆ ಅನೇಕ ಸಚಿವರು, ಶಾಸಕರು, ಲೋಕಸಭಾ ಸದಸ್ಯರು, ವಿಧಾನಪರಿಷತ್ ಸದಸ್ಯರು ಆಗಮಿಸಲಿದ್ದಾರೆ ಎಂದು ಖನಿಜ





ನಿಗಮದ ಅಧ್ಯಕ್ಷರು ಹಾಗೂ ಶಾಸಕ ಜಿ.ಎಸ್. ಪಾಟೀಲ ಮಾಹಿತಿ ನೀಡಿದ್ದಾರೆ.

ಅಮೃತ ಯೋಜನೆಯಡಿ ರೋಣ, ಗಜೇಂದ್ರಗಡ, ನರೇಗಲ್ಲ ಪಟ್ಟಣಗಳಿಗೆ ಕುಡಿಯುವ ನೀರು ಯೋಜನೆ–6798 ಲಕ್ಷ ರೂ.ಗಳು, ರೋಣ ಪಟ್ಟಣದಲ್ಲಿ ಜಿಟಿಟಿಸಿ ಕಾಲೇಜು ಕಟ್ಟಡ ನಿರ್ಮಾಣ–5000 ಲಕ್ಷ ರೂ.ಗಳು, ಮುನವಳ್ಳಿ ಕೋಟುಮಚಗಿ ರಾಹೆ–83ರ 95,90 ಕಿ.ಮೀಯಿಂದ 104.50 ಕಿಮೀ ಹಾಗೂ 107ರಿಂದ 110 ಕಿ.ಮೀವರೆಗೆ ರಸ್ತೆ ಸುಧಾರಣೆ–2000 ಲಕ್ಷ ರೂ.ಗಳು, ಜಕ್ಕಲಿ ಗ್ರಾಮದಲ್ಲಿ ದಿ. ಅಂದಾನಪ್ಪ ದೊಡ್ಡಮೇಟಿಯವರ ಸ್ಮಾರಕ ನಿರ್ಮಾಣ–995 ಲಕ್ಷ ರೂ.ಗಳು, ಗಜೇಂದ್ರಗಡ ತಾಲೂಕು ಪ್ರಜಾಸೌಧ ಕಟ್ಟಡ ನಿರ್ಮಾಣ–860 ಲಕ್ಷ ರೂ.ಗಳು, ರೋಣ ಪಟ್ಟಣದಲ್ಲಿ ಮೆಟ್ರಿಕ್ ನಂತರದ ಬಾಲಕಿಯರ–ಬಾಲಕರ ವಸತಿ ನಿಲಯ ಕಟ್ಟಡ ಹಾಗೂ ಗಜೇಂದ್ರಗಡ ಮತ್ತು ನರೇಗಲ್ಲ ಪಟ್ಟಣಗಳಲ್ಲಿ 2 ವಸತಿ ನಿಲಯಗಳ ಪ್ರಾರಂಭೋತ್ಸವ–800 ಲಕ್ಷ ರೂ.ಗಳು, ಡಂಬಳ, ಪೇಠಾಲೂರ, ಜಂತ್ಲಿ ಶಿರೂರ ಗ್ರಾಮಗಳ ಕೆರೆ ಅಭಿವೃದ್ಧಿ ಹಾಗೂ ಸವಡಿ ಹೊನ್ನಾಪೂರ ಬ್ರಿಡ್ಜ್ ಕಂ ಬ್ಯಾರೇಜ್ ನಿರ್ಮಾಣ–650 ಲಕ್ಷ ರೂ.ಗಳು, ರೋಣ ಪಟ್ಟಣದಲ್ಲಿ ಪ್ರವಾಸಿ ಮಂದಿರ ಕಟ್ಟಡ–395 ಲಕ್ಷ ರೂ.ಗಳು, ರೋಣದಲ್ಲಿ ಸರ್ಕಾರಿ ಪದವಿಪೂರ್ವ ಕಾಲೇಜು ಕೊಠಡಿಗಳ ನಿರ್ಮಾಣ ಹಾಗೂ ಡಂಬಳ ಗ್ರಾಮದಲ್ಲಿ ಕಸ್ತೂರಬಾ ಗಾಂಧಿ ಬಾಲಿಕಾ ವಿದ್ಯಾಲಯ–287 ಲಕ್ಷ ರೂ.ಗಳು, ಡಂಬಳದಲ್ಲಿ ಮಲತ್ಯಾಜ್ಯ ಸಂಸ್ಕರಣಾ ಘಟಕ ನಿರ್ಮಾಣ–93,81 ಲಕ್ಷ ರೂ.ಗಳು, ಜಿಗಳೂರ ಕೆರೆ ಪಕ್ಕದಲ್ಲಿ ಪ್ರವಾಸಿ ಉದ್ಯಾನವನ–50 ಲಕ್ಷ ರೂಗಳ ವೆಚ್ಚದಲ್ಲಿ ನಿರ್ಮಾಣವಾಗಲಿವೆ.

### ಕಾಮಗಾರಿಗಳ ಉದ್ಘಾಟನೆ

ಮೇವುಂಡಿ ಗ್ರಾಮದಲ್ಲಿ ಮೊರಾರ್ಜಿ ದೇಸಾಯಿ ವಸತಿ ಶಾಲೆ ಉದ್ಘಾಟನೆ, ಗಜೇಂದ್ರಗಡದಲ್ಲಿ ವಸತಿ ನಿಲಯ ಮತ್ತು ರೋಣದಲ್ಲಿ ವಸತಿ ಶಾಲೆ ಪ್ರಾರಂಭೋತ್ಸವ–1000 ಲಕ್ಷ ರೂ.ಗಳು, ರೋಣ, ಗಜೇಂದ್ರಗಡ, ನರೇಗಲ್ಲ ಪಟ್ಟಣಗಳಲ್ಲಿ ಇಂದಿರಾ ಕ್ಯಾಂಟೀನ್ ಉದ್ಘಾಟನೆ–392.01 ಲಕ್ಷ ರೂ.ಗಳು, ಹಿರೇವಡ್ಡಟ್ಟಿ ಗ್ರಾಮದಲ್ಲಿ ಮೆಟ್ರಿಕ್ ಪೂರ್ವ ಬಾಲಕರ ವಸತಿ ನಿಲಯದ ಕಟ್ಟಡ–250 ಲಕ್ಷ ರೂ.ಗಳು, ಸವಡಿ ಗ್ರಾಮದ ಪ್ರಾಥಮಿಕ ಆರೋಗ್ಯ ಕೇಂದ್ರದ ಸಿಬ್ಬಂದಿ ವಸತಿ ಗೃಹ–91.75 ಲಕ್ಷ ರೂ.ಗಳು, ಅಬ್ಬಿಗೇರಿ ಗ್ರಾಮದ ಸಾರ್ವಜನಿಕ ಗ್ರಂಥಾಲಯ–27.00 ಲಕ್ಷ ರೂ.ಗಳ ವೆಚ್ಚದಲ್ಲಿ ನಿರ್ಮಾಣವಾಗಿದ್ದು, ಇಂದು ಉದ್ಘಾಟನೆಗೊಳ್ಳಲಿವೆ.

## ವಯನಾಡ್ ದುರಂತಕ್ಕೆ ಸಿಗದ ಪರಿಹಾರ ಪ್ಯಾಕೇಜ್ : ಕೇಂದ್ರದ ವಿರುದ್ಧ ಪ್ರಿಯಾಂಕಾ ಗಾಂಧಿ ಪ್ರತಿಭಟನೆ

**■ವಿಜಯಸಾಕ್ಷಿ ಸುದ್ದಿ, ನವದೆಹಲಿ**

ರಾಜಕೀಯ ಕಾರಣಕ್ಕಾಗಿ ವಯನಾಡು ಭೂಕುಸಿತದ ಸಂತ್ರಸ್ತರಿಗೆ ಕೇಂದ್ರ ಸರ್ಕಾರವು ನೆರವು ನಿರಾಕರಿಸುತ್ತಿದೆ ಕಾಂಗ್ರೆಸ್ ಸಂಸದೆ ಪ್ರಿಯಾಂಕಾ ಗಾಂಧಿ ಅವರು ಶನಿವಾರ ಆರೋಪಿಸಿದ್ದು, ನೈಸರ್ಗಿಕ ವಿಕೋಪಗಳ ಸಮಯದಲ್ಲಿ ಸರ್ಕಾರವು ಯಾವುದೇ ತಾರತಮ್ಯ ಮಾಡಬಾರದು ಎಂದು ಪ್ರತಿಪಾದಿಸಿದ್ದಾರೆ.

ವಯನಾಡ್ ದುರಂತಕ್ಕೆಕೇಂದ್ರದ ತಾರತ್ಯಮ ನೀತಿಯನ್ನು ವಿರೋಧಿಸಿ ವಯನಾಡ್ ಸಂಸದೆ ಪ್ರಿಯಾಂಕಾ ಗಾಂಧಿ ಸೇರಿದಂತೆ ಕೇರಳದ ಸಂಸದರು ಶನಿವಾರ ಸಂಸತ್ ಆವರಣದಲ್ಲಿ ಪ್ರತಿಭಟನೆ ನಡೆಸಿದ ನಂತರ, ಭೂಕುಸಿತ ಪೀಡಿತ ವಯನಾಡ್‌ಗೆ ಕೇಂದ್ರದಿಂದ ಪರಿಹಾರ ಪ್ಯಾಕೇಜ್‌ಗೆ ಒತ್ತಾಯಿಸಿ ಅವರು ಈ ಹೇಳಿಕೆ ನೀಡಿದ್ದಾರೆ.

## ಆಂತರಿಕ, ಬಾಹ್ಯ ಕಲಹ : ನಿರಾಶ್ರಿತರಾದ 1.1 ಮಿಲಿಯನ್ ಸಿರಿಯಾ ಜನತೆ

**■ವಿಜಯಸಾಕ್ಷಿ ಸುದ್ದಿ, ಸಿರಿಯಾ**

ಸಿರಿಯಾದಲ್ಲಿ ಇತ್ತೀಚೆಗೆ ಆಂತರಿಕ ಮತ್ತು ಬಾಹ್ಯ ಕಲಹಗಳು ಉಲ್ಬಣಗೊಂಡ ನಂತರ ತೀವ್ರ ಆಹಾರ ಮತ್ತು ಇಂಧನ ಕೊರತೆ ಸಮಸ್ಯೆ ಉಂಟಾಗಿದೆ. ಇದರಿಂದ ದೇಶದಾದ್ಯಂತ 1.1 ಮಿಲಿಯನ್‌ಗಿಂತಲೂ ಹೆಚ್ಚು ಜನರು ತಮ್ಮ ಮನೆಗಳನ್ನು ತೊರೆದಿದ್ದಾರೆ ಎಂದು ವಿಶ್ವ ಸಂಸ್ಥೆಯ ಮಾನವೀಯ ವ್ಯವಹಾರಗಳ ಸಮನ್ವಯ ಸಂಸ್ಥೆ (ಒಸಿಹೆಚ್‌ಎ) ತಿಳಿಸಿದೆ.

ವಿಶ್ವಸಂಸ್ಥೆ ಮತ್ತು ಅದರ ಪಾಲುದಾರರು ಭದ್ರತಾ ಪರಿಸ್ಥಿತಿಯನ್ನು ನೋಡಿಕೊಂಡು ಮಾನವೀಯ ಚಟುವಟಿಕೆಗಳನ್ನು ಮುಂದುವರೆಸಿದ್ದಾರೆ. ಕೆಲವು ಪಾಲುದಾರರು ಡಮಾಸ್ಕಸ್, ಟಾರ್ಟಸ್, ಲಟಾಕಿಯಾ ಮತ್ತು ರಕ್ಕಾ ನಗರಗಳ ವ್ಯಾಪ್ತಿಯಲ್ಲಿ ಮಾತ್ರ ಸೀಮಿತ ಕಾರ್ಯಾಚರಣೆ ನಡೆಸುತ್ತಿದ್ದಾರೆ ಎಂದು ಒಸಿಹೆಚ್‌ಎ ಹೇಳಿದೆ.



ಸಂಪಾದಕೀಯ

# ಸಂವಿಧಾನ ತಿದ್ದುಪಡಿಗೂ ಬದಲಾವಣೆಗೂ ಅಂತರವಿದೆ

ಲೋಕಸಭೆ ಕೆಳಮನೆಯಲ್ಲಿ ಸಂವಿಧಾನವನ್ನು ಅಂಗೀಕರಿಸಿದ 75ನೇ ವರ್ಷಾಚರಣೆ ನಿಮಿತ್ತ ಎರಡು ದಿನಗಳ ವಿಶೇಷ ಚರ್ಚೆಯನ್ನ ಆಯೋಜಿಸಿದೆ. ಸಂವಿಧಾನದ ಪ್ರತಿ ಸಂಸತ್ತು ಚರ್ಚೆಯ ಮೂಲಕ ಗೌರವ ಅರ್ಪಿಸಿರುವುದು ಒಳ್ಳೆಯ ಬೆಳವಣಿಗೆ.

ಭವಿಷ್ಯದಲ್ಲಿಯೂ ಕಾಲಕಾಲಕ್ಕೆ ಸಂವಿಧಾನದ ಕುರಿತು ಇಂಥ ಚರ್ಚೆ, ಆರೋಗ್ಯಕರ ವಿಮರ್ಶೆ ನಡೆಯಬೇಕು. ಆ ಮೂಲಕ ಸಂವಿಧಾನದ ಆಶಯಗಳನ್ನ, ಅದು ನೀಡುವ ಹೊಸ ಹೊಸ ಆಲೋಚನೆಗಳನ್ನ ಗ್ರಹಿಸಿಕೊಂಡು ಮುನ್ನಡೆಯುವಂತಾಗಬೇಕು. ಆ ನಿಟ್ಟಿನಲ್ಲಿ ಕೇಂದ್ರ ಸರ್ಕಾರ ಮುನ್ನಡೆಯಲಿ ಎನ್ನುವ ಆಶಯ ವ್ಯಕ್ತಪಡಿಸುತ್ತಾ, ಚರ್ಚೆಯ ಸಂದರ್ಭದಲ್ಲಿ ಪ್ರಧಾನಿ ನರೇಂದ್ರ ಮೋದಿ ಪ್ರಸ್ತಾಪಿಸಿದ ವಿಷಯಗಳ ಕಡೆ ಗಮನಹರಿಸೋಣ.

ಸಂವಿಧಾನದ ಕುರಿತು ಚರ್ಚೆ ನಡೆಯುವ ಸಂದರ್ಭದಲ್ಲಿ ಪ್ರಧಾನಿ ನರೇಂದ್ರ ಮೋದಿ ಮಾತನಾಡಿ, ಆರು ದಶಕಗಳ ಕಾಂಗ್ರೆಸ್ ಆಡಳಿತ ಅವಧಿಯಲ್ಲಿ 75 ಬಾರಿ ಸಂವಿಧಾನವನ್ನ ಬದಲಾವಣೆ ಮಾಡಿದೆ ಎಂದು ಆರೋಪಿಸಿದ್ದಾರೆ. ಸಂವಿಧಾನ ಬದಲಾವಣೆಗೂ ಮತ್ತು ತಿದ್ದುಪಡಿಗಳು ಸಾಕಷ್ಟು ವ್ಯತ್ಯಾಸ ಇದೆ ಎನ್ನುವುದನ್ನು ನರೇಂದ್ರ ಮೋದಿ ಅರ್ಥ ಮಾಡಿಕೊಳ್ಳಲಿ.

ಸಂವಿಧಾನಕ್ಕೆ ತಿದ್ದುಪಡಿಯನ್ನೇ ಬದಲಾವಣೆ ಎನ್ನುವ ಮೂಲಕ ಪ್ರಧಾನಿ ನರೇಂದ್ರ ಮೋದಿ, ಚರ್ಚೆಯನ್ನ ರಾಜಕೀಕರಣಗೊಳಿಸಿದ್ದಾರೆ. ಸಂವಿಧಾನದಲ್ಲಿಯೇ ತಿದ್ದುಪಡಿಗೆ ಅವಕಾಶವನ್ನು ನೀಡಿದೆ. ಆ ಅವಕಾಶವನ್ನ ಬಳಸಿಕೊಂಡೇ ಕಾಂಗ್ರೆಸ್ ಸರ್ಕಾರ ತಿದ್ದುಪಡಿಗಳನ್ನ ಮಾಡಿದೆ. ಕಾಂಗ್ರೆಸ್ ಮಾತ್ರವಲ್ಲದೆ ನರೇಂದ್ರ ಮೋದಿ ಅದೇ ಸಂವಿಧಾನದ ಅಡಿಯಲ್ಲಿಯೇ ಜಮ್ಮು-ಕಾಶ್ಮೀರಕ್ಕೆ ನೀಡಿದ್ದ ವಿಶೇಷ ಸ್ಥಾನಮಾನವನ್ನು ಹಿಂಪಡೆದಿದ್ದನ್ನ ಮರೆತಿದ್ದಾರೆ.

ಕಾಂಗ್ರೆಸ್ ಸರ್ಕಾರದ ಅವಧಿಯಲ್ಲಿ ಆಗಿರುವ ತಿದ್ದುಪಡಿಗಳ ಬಗ್ಗೆ ಬಿಜೆಪಿಗೆ ಅಸಮಾಧಾನ ಇದ್ದರೆ, ಅದೇ ಸಂವಿಧಾನದ ಮೂಲಕ ತಿದ್ದುಪಡಿಗಳನ್ನು ಮತ್ತೊಮ್ಮೆ ಬದಲಾಯಿಸಲು ಅವಕಾಶವಿದೆ. ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಎನ್.ಡಿ.ಎ ಸರ್ಕಾರ ಆ ರೀತಿ ತಿದ್ದುಪಡಿಗಳನ್ನು ಮಾಡಿದರೆ ಅದು ಸಂವಿಧಾನದ ಬದಲಾವಣೆ ಎನಿಸಿಕೊಳ್ಳುವುದಿಲ್ಲ. ಅದು ಕೇವಲ ತಿದ್ದುಪಡಿ ಮಾತ್ರ ಎನ್ನುವುದನ್ನು ಅರ್ಥ ಮಾಡಿಕೊಳ್ಳಬೇಕು.

## ಜಿಲ್ಲಾ ಉಸ್ತುವಾರಿ ಸಚಿವರ ಜಿಲ್ಲಾ ಪ್ರವಾಸ

■ವಿಜಯಸಾಕ್ಷಿ ಸುದ್ದಿ, ಗದಗ



ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಚ್.ಕೆ. ಪಾಟೀಲ ಅವರು ಡಿಸೆಂಬರ್ 15 ರಂದು ಜಿಲ್ಲೆಯಲ್ಲಿ ಪ್ರವಾಸ ಕೈಗೊಳ್ಳಲಿದ್ದು, ವಿವರ ಈ ಕೆಳಗಿನಂತಿದೆ.

ಡಿಸೆಂಬರ್ 15 ರಂದು ಬೆಳಿಗ್ಗೆ 11.05 ಗಂಟೆಗೆ ಹುಬ್ಬಳ್ಳಿಯಿಂದ ಮುಖ್ಯಮಂತ್ರಿಗಳೊಂದಿಗೆ ಹೆಲಿಕಾಪ್ಟರ್ ಮೂಲಕ ಹೊರಟು ಗದಗ ತಾಲೂಕು ಹರ್ಲಾಪುರ ಗ್ರಾಮದಲ್ಲಿ ಶ್ರೀಮತಿ ಕಮಲಾಬಾಯಿ ನಾರಾಯಣರಾವ್ ಕುಲಕರ್ಣಿ ಸರ್ಕಾರಿ ಪ್ರೌಢಶಾಲೆ ಆವರಣದ ಹೆಲಿಪ್ಯಾಡ್‌ಗೆ ಆಗಮಿಸುವರು.

ನಂತರ ಬೆ. 11.30 ಗಂಟೆಗೆ ಹರ್ಲಾಪುರ ಗ್ರಾಮದಲ್ಲಿ ಶ್ರೀ ಬೀರಲಿಂಗೇಶ್ವರ ದೇವಸ್ಥಾನ ಸೇವಾ ಸಮಿತಿಯಿಂದ ಆಯೋಜಿಸಲಾದ ಶ್ರೀ ಬೀರಲಿಂಗೇಶ್ವರ ಹಾಗೂ ಶ್ರೀ ಮಾಳಿಂಗರಾಯ ಮೂರ್ತಿ ಪ್ರತಿಷ್ಠಾಪನೆ ಹಾಗೂ ದೇವಸ್ಥಾನ ಉದ್ಘಾಟನೆ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವರು. ನಂತರ ಮಧ್ಯಾಹ್ನ 12 ಗಂಟೆಗೆ ಹರ್ಲಾಪುರ ಗ್ರಾಮದ ಶ್ರೀಮತಿ ಕಮಲಾಬಾಯಿ ನಾರಾಯಣರಾವ್ ಕುಲಕರ್ಣಿ ಸರ್ಕಾರಿ ಪ್ರೌಢಶಾಲೆ ಆವರಣದ ಹೆಲಿಪ್ಯಾಡ್‌ನಿಂದ ಹೆಲಿಕಾಪ್ಟರ್ ಮೂಲಕ ನಿರ್ಗಮಿಸಿ ರೋಣ ಪಟ್ಟಣದ ದಿ. ಪೌಲ್ ಅಕಾಡೆಮಿ ಸ್ಕೂಲ್ ಆವರಣದಲ್ಲಿನ ಹೆಲಿಪ್ಯಾಡ್ ತಲುಪುವುದು.

ಮಧ್ಯಾಹ್ನ 12.15 ಗಂಟೆಗೆ ರೋಣದ ಡ್ರೋಣಾಚಾರ್ಯ ತಾಲೂಕು ಕ್ರೀಡಾಂಗಣದಲ್ಲಿ ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ದಿಂದ ಆಯೋಜಿಸಿರುವ ರೋಣ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ವಿವಿಧ ಅಭಿವೃದ್ಧಿ ಕಾಮಗಾರಿಗಳ ಉದ್ಘಾಟನೆ ಮತ್ತು ಶಂಕುಸ್ಥಾಪನೆ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವರು.

ನಂತರ ಸಂಜೆ 4 ಗಂಟೆಗೆ ರೋಣದಿಂದ ಹೆಲಿಕಾಪ್ಟರ್ ಮೂಲಕ ನಿರ್ಗಮಿಸಿ ಸಂಜೆ 5 ಗಂಟೆಗೆ ಬೆಳಗಾವಿಯ ಸುವರ್ಣ ಸೌಧದ ಹೆಲಿಪ್ಯಾಡ್ ಗೆ ಪ್ರಯಾಣಿಸುವರು ಎಂದು ಸಚಿವರ ಕಾರ್ಯಾಲಯ ತಿಳಿಸಿದೆ.

**ಬೀದಿನಾಯಿ, ಬಿಡಾಡಿ ದನಗಳಿಂದ ದುರ್ಘಟನೆ । ಕ್ರಮಕ್ಕೆ ಒತ್ತಾಯಿಸಿ ಧ್ವನಿ ಎತ್ತಿದ ವಿ.ಪ ಸದಸ್ಯ ಎಸ್.ವಿ. ಸಂಕನೂರ**

## ಮುಂದಾಗುವ ಅನಾಹುತಗಳನ್ನು ತಪ್ಪಿಸಿ

■ವಿಜಯಸಾಕ್ಷಿ ಸುದ್ದಿ, ಗದಗ/ಬೆಳಗಾವಿ



ನಗರ ಪ್ರದೇಶಗಳಲ್ಲಿ ಬೀದಿ ನಾಯಿಗಳು ಹಾಗೂ ಬಿಡಾಡಿ ದನಗಳ ಸಂಖ್ಯೆ ಮಿತಿಮೀರಿದ್ದು, ಜನರ ಪ್ರಾಣಕ್ಕೆ ಹಾನಿ ಆಗುತ್ತಿದೆ. ಅವುಗಳನ್ನು ನಿಯಂತ್ರಿಸಲು ಸಂಬಂಧಪಟ್ಟವರಿಗೆ ನಿರ್ದೇಶನ ನೀಡಲು ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ ಅವರು ಬೆಳಗಾವಿಯ ಅಧಿವೇಶನದಲ್ಲಿ ಧ್ವನಿ ಎತ್ತಿದರು.

ಇತ್ತೀಚೆಗೆ ಗದಗ ಜಿಲ್ಲೆ ಮುಂಡರಗಿ ಪಟ್ಟಣದಲ್ಲಿ ವಿರೇಶ ದೊಡ್ಡಕಾಳೆ ಎಂಬ ಮಗುವಿನ ಮೇಲೆ ಬೀದಿನಾಯಿಗಳು ದಾಳಿ ನಡೆಸಿ ಪ್ರಾಣಾಪಾಯ ಉಂಟಾಗಿರುವುದು ಸಾರ್ವಜನಿಕರನ್ನು ಭಯಭೀತರನ್ನಾಗಿ ಮಾಡಿದೆ. ಅದೇ ರೀತಿ ಧಾರವಾಡದಲ್ಲಿಯೂ ಸಹ ನಾಯಿಗಳ ದಾಳಿಯಿಂದ ಒಂದು ಮಗು ರೇಬಿಸ್ ರೋಗಕ್ಕೆ ತುತ್ತಾಗಿದೆ.

ನಾಯಿಗಳ ಹಾವಳಿ ಅಲ್ಲದೇ ನಗರ ಹಾಗೂ ಶಹರದ ಪ್ರಮುಖ ಬೀದಿಗಳಲ್ಲಿ ಬಿಡಾಡಿ ದನಗಳಿಂದ ಸಾರ್ವಜನಿಕರಿಗೆ ತುಂಬಾ ತೊಂದರೆ ಆಗುತ್ತಿರುವುದು ಕಂಡುಬಂದಿದೆ. ಕೆಲವು ತಿಂಗಳುಗಳ ಹಿಂದೆ ಬೆಟಗೇರಿ ಭಾಗದಲ್ಲಿ ದನಗಳ ಗುದ್ದಾಟದಿಂದ ಓರ್ವ ವೃದ್ಧ ಮೃತಪಟ್ಟಿರುವುದು, ಧಾರವಾಡದಲ್ಲಿ ಬಿಡಾಡಿ ದನಗಳ ಗುಂಪು ಮಲಗಿದ್ದು ತಪ್ಪಿಸಲು ಹೋಗಿ ಅಟೋ ಮತ್ತು ಲಾರಿ ನಡುವೆ ಡಿಕ್ಕಿ ಆಗಿ ಮೂವರು ಸಾವನ್ನಪ್ಪಿ ಇಬ್ಬರು ಗಾಯಗೊಂಡಿರುವ ಘಟನೆಗಳಾಗಿವೆ.

ಈ ಎಲ್ಲ ವಿಚಾರಗಳನ್ನು ಸದನದ ಶೂನ್ಯ ಅವಧಿಯಲ್ಲಿ ವಿಧಾನ ಪರಿಷತ್ ಸದಸ್ಯರಾದ ಎಸ್.ವಿ. ಸಂಕನೂರ ಪ್ರಸ್ತಾಪಿಸಿ, ಪೌರಾಡಳಿತ ಸಚಿವರಿಗೆ ಆಯಾ ಪುರಸಭೆ, ನಗರಸಭೆ ಹಾಗೂ ಮಹಾನಗರ ಪಾಲಿಕೆಯ ಆಯುಕ್ತರಿಗೆ ಸೂಕ್ತ ಸೂಚನೆ ನೀಡಿ ಮುಂಬರುವ ದಿನಗಳಲ್ಲಿ ಬೀದಿ ನಾಯಿಗಳು ಹಾಗೂ ಬಿಡಾಡಿ ದನಗಳನ್ನು ನಿಯಂತ್ರಿಸಿ ಆಗುವ ಅನಾಹುತಗಳನ್ನು ತಪ್ಪಿಸಲು ಒತ್ತಾಯಿಸಿದರು.

**'ಅವ್ವ' ಸೇವಾ ಟ್ರಸ್ಟ್ ವತಿಯಿಂದ ಅವ್ವನ ನೆನಪಿನ ದಿವ್ಯ ದೀಪವನ್ನು ಬೆಳಗಿಸುವ ಕಾರ್ಯಕ್ರಮ ಇಂದು**

# ಮಾತೋಶ್ರೀ ಗುರವ್ವನವರ ಪುಣ್ಯಸ್ಮರಣೆ

ತಾಯಿಯ ಮಮತೆ ಅಂದರೆ ಹಾಗೆ. ಆಕೆ ತನಗೆ ಹತ್ತು ಮಕ್ಕಳಿದ್ದರೂ ಎಲ್ಲರಿಗೂ ಮಮತೆ ತೋರಿ ಸಾಕುವಳು. ಆದರೆ ಮಕ್ಕಳು ಹತ್ತು ಮಂದಿ ಇದ್ದರು ಒಬ್ಬ ತಾಯಿಯನ್ನು ಸಾಕಲು ಅವರೊಳಗೆ ಎಷ್ಟು ಒಳಜಗಳ!

ಇಂತಹ ಹೆತ್ತವರಿಂದು ತಮ್ಮ ಕೊನೆಯ ದಿನಗಳನ್ನು ಒಂಟಿತನದಿಂದ ಕಳೆಯುತ್ತಿದ್ದಾರೆ. ಎಲ್ಲೆಡೆ ವೃದ್ಧಾಶ್ರಮಗಳು ತಲೆ ಎತ್ತುತ್ತಿರುವುದು ಬೇಸರದ ಸಂಗತಿ. ಹೀಗಾದರೆ ಹೆತ್ತವರ ಮತ್ತು ಮಕ್ಕಳ ಬಾಂಧವ್ಯಕ್ಕೆ ಏನು ಬೆಲೆ ಎಂಬ ನೋವನ್ನು ಅರಿತ ಬಸವರಾಜ ಹೊರಟ್ಟಿಯವರು ಸಮಾಜದಲ್ಲಿ ಜಾಗೃತಿ ಮೂಡಿಸಲು ತಮ್ಮದೇ ಆದ ಅಳಿಲು ಸೇವೆಯನ್ನು ಮಾಡುತ್ತಿದ್ದಾರೆ.

ಇಂಥದೊಂದು ಭಾವನಾತ್ಮಕ ವೇದಿಕೆಯನ್ನು ನಾಡಿನ ಜನತೆಗಾಗಿ ಇದೇ ಡಿಸೆಂಬರ್ 15ರಂದು ಬೆಳಿಗ್ಗೆ 10.30 ಗಂಟೆಗೆ ಹುಬ್ಬಳ್ಳಿಯ ಗುಜರಾತ ಭವನದಲ್ಲಿ ಸಭಾಪತಿ ಬಸವರಾಜ ಹೊರಟ್ಟಿಯವರ ಮಾತೋಶ್ರೀಯವರ ಪುಣ್ಯಸ್ಮರಣೆಯ ನೆಪದಲ್ಲಿ ಅವ್ವನ ನೆನಪಿನ ದಿವ್ಯ ದೀಪವನ್ನು ಬೆಳಗಿಸುವ ಕಾರ್ಯಕ್ರಮ ನಡೆಯಲಿದೆ. ಅವ್ವನ ಮಹತ್ವದ ಕುರಿತು ಅರಿವು ಮೂಡಿಸುವ ವಿಶೇಷ ಕಾರ್ಯಕ್ರಮವನ್ನು ಅವ್ವ ಸೇವಾ ಟ್ರಸ್ಟ್ ಆಯೋಜಿಸಲು ಮುಂದಾಗಿದೆ. ಇತ್ತೀಚಿನ ದಿನಗಳಲ್ಲಿ ಹೆತ್ತವರನ್ನು ನಿರ್ಲಕ್ಷಿಸುವ ಮನೋಭಾವ ಹೆಚ್ಚಾಗುತ್ತಿರುವುದು ವಿಷಾದದ ಸಂಗತಿ. ಇಂತಹ ಕಹಿ ಘಟನೆಗಳು ಮುಂದೆ ಸಮಾಜದಲ್ಲಿ ನಡೆಯಬಾರದು ಎಂಬ ಆಶಯ ಹೊತ್ತು ಅವ್ವ ಸೇವಾ ಟ್ರಸ್ಟ್ ಜಾಗೃತಿ ಮೂಡಿಸುವ ಕಾರ್ಯಕ್ರಮವನ್ನು ಹುಬ್ಬಳ್ಳಿ ಸೇರಿದಂತೆ ಬೇರೆ ಬೇರೆ ಜಿಲ್ಲೆಗಳಲ್ಲಿ ಆಯೋಜಿಸುತ್ತಾ ಬಂದಿದೆ.

'ಅವ್ವ'ನ ಅಂತಃಕರಣ, ಪ್ರೀತಿ, ಮಮತೆ, ತ್ಯಾಗ, ಕರುಣೆ,



ಸಂಭ್ರಮ ಬದುಕಿನ ಸಾರ್ಥಕ್ಯ, ಅದಮ್ಯ ಉತ್ಸಾಹ ಪ್ರತ್ಯಕ್ಷ ದೈವ ಸ್ವರೂಪಿನ ಅವ್ವನ ಕುರಿತಾಗಿ ಹೀಗೆ ಸಾಗುತ್ತಾ ಹೋಗುತ್ತದೆ. 'ಅವ್ವ' ಎಂಬ ಸುತ್ತಲಿನ ಪದ ಪುಂಜಗಳ ಗುಂಪು 'ಅವ್ವ' ಅಂದರೇನೇ ಹಾಗೆ ಹುಣ್ಣಿಮೆಯ ಚಂದಿರನ ಬೆಳಕಂತೆ ಮುಂಜಾನೆಯ ತಂಪು ನೆರಳಿನಂತೆ ಸದಾ ಪ್ರಫುಲ್ಲ ಇಂತಹ 'ಅವ್ವ' ನೊಂದಿಗಿನ ಅವಿನಾಭಾವ ಸಂಬಂಧದ ಕ್ಷಣಗಳನ್ನು ಮೆಲುಕು ಹಾಕುವ ಈ ಕಾರ್ಯಕ್ರಮ ಅತ್ಯಂತ ಮಹತ್ವದ್ದಾಗಿದೆ.

ಈಗಿನ ಪೀಳಿಗೆಯ ಈ ನಡೆಗೆ ಹೆತ್ತವರೇ ಪೂರ್ಣ ಕಾರಣರಲ್ಲದಿದ್ದರೂ ಹೆತ್ತವರ ಕಾರಣವೂ ಹೆಚ್ಚಿದೆ. ನೂರಾರು ಭಾವನೆಗಳನ್ನು ಭಾಷೆಯಲ್ಲಿ ಬಂಧಿಸಿ ಯಶಸ್ಸನ್ನು ದುಡ್ಡು ಎಂದು ವ್ಯಾಖ್ಯಾನಿಸಿ, ಪ್ರಸಿದ್ಧಿಯನ್ನು ಗೆಲುವು ಎಂದು ಬಣ್ಣಿಸಿ, ತೊರೆದು ಬದುಕುವುದೇ ನೆಮ್ಮದಿಯೆಂದು ವರ್ಣಿಸಿ ಬಂಧವನ್ನು ಬರೀ ಮೊಬೈಲ್ ನಂಬರನಲ್ಲಿ ಬಂಧಿಸಿ ಕುಳಿತಿರುವ ನಮಗೆ ಕರುಳ ಬಂಧದ ಅಸಲಿ ಭಾವ ಹೇಗೆ ಮೂಡೀತು? ಜೀವಿಸುವುದೆಂದರೆ ತಿನ್ನುವುದು, ಉಸಿರಾಡುವುದು ಅಷ್ಟೇ ಅಲ್ಲ ನಾವು ನಮ್ಮವರೊಂದಿಗೆ ಹೆಣೆದುಕೊಂಡು ಬಂಧಿಸಿಕೊಂಡು ನಗುವುದು.

ತಂದೆ-ತಾಯಿ-ಮಕ್ಕಳ ಸಂಬಂಧದ ಕುರಿತು ಅರಿವು ಜಾಗೃತಿ ಮೂಡಿಸುವ ಅವಶ್ಯಕತೆಯಿದೆ. ಇಂದಿನ ಶೈಕ್ಷಣಿಕ ವ್ಯವಸ್ಥೆಯಲ್ಲಿ ಹುಟ್ಟಿದ ಒಂದೆರಡು ವರ್ಷದಲ್ಲಿಯೇ ಮಗು ತಂದೆ-ತಾಯಿ ಪ್ರೀತಿಯಿಂದ ವಂಚಿತರಾಗುತ್ತಿದ್ದಾರೆ. ಬೇಬಿ ಸಿಟಿಂಗ್, ಕಿಡ್ಸ್‌ಕೇರ್, ಎಲ್.ಕೆ.ಜಿ.ಯಂತಹ ಶಿಕ್ಷಣ ಪದ್ಧತಿಯಲ್ಲಿ ಮಗು ಸಿಲುಕಿ, ತಂದೆ-ತಾಯಂದಿರು ಕೊಡಬೇಕಾದ ಪರಿಪೂರ್ಣ ಪ್ರೀತಿ, ಮಮತೆ, ಆರೈಕೆ, ಹಾರೈಕೆಯಿಂದ ಮಗು ವಂಚಿತವಾಗುತ್ತಿದೆ. ಇದರ ಪರಿಣಾಮದಿಂದ ತಂದೆ ತಾಯಿ ಮಕ್ಕಳ ಸಂಬಂಧ ಅಷ್ಟೊಂದು ಗಟ್ಟಿಯಾಗಿ ಉಳಿಯುತ್ತಿಲ್ಲ ಎಂಬುದು ಅಲ್ಲಲ್ಲಿ ಕೇಳುಬರುತ್ತಿರುವ ಕೂಗು. ಇಂತಹ ಶೈಕ್ಷಣಿಕ ಪದ್ಧತಿಗಳ ಕುರಿತು ಮರು ಪರಿಶೀಲನೆ ಅವಶ್ಯಕತೆಯಿದೆ. ಇಂತಹ ತಾಯಿ ತಂದೆಯ ಕುರಿತು ಯುವ ಪೀಳಿಗೆಗೆ ಜಾಗೃತಿ ಅರಿವು ಮೂಡಿಸದೇ ಹೋದರೆ ಬದುಕಿನಲ್ಲಿ ಸಂತಸಕ್ಕಿಂತ ಸಂಕಷ್ಟಗಳೇ ಹೆಚ್ಚಾಗುತ್ತಿವೆ. ಇಂತಹ ನೂರಾರು ಪ್ರಸಂಗಗಳು ನಿತ್ಯ ಸುದ್ದಿಯಾಗುತ್ತಿರುವುದು ಕಳವಳಕಾರಿ ಸಂಗತಿ. ಇದನ್ನರಿತ ಮಾಜಿ ಸಚಿವ ಬಸವರಾಜ ಹೊರಟ್ಟಿಯವರು ತಮ್ಮ ತಾಯಿ ಗುರವ್ವ ಶಿವಲಿಂಗಪ್ಪ ಹೊರಟ್ಟಿ ಸ್ಮರಣಾರ್ಥ, ಅವ್ವ ಸೇವಾ ಸಂಸ್ಥೆ ಹುಟ್ಟು ಹಾಕಿ ಹತ್ತಾರು ವಿಧಾಯಕ ಕಾರ್ಯಕ್ರಮಗಳನ್ನು ಆಯೋಜಿಸಿ ತಮ್ಮ ತಾಯಿ ನೆನಪಲ್ಲಿ ಜಗತ್ತಿನ ಎಲ್ಲ ತಾಯಂದಿರ ಕುರಿತು ಅರಿವು ಮೂಡಿಸುವ ಪುಟ್ಟ ಪುಟ್ಟ ಹೆಜ್ಜೆಗಳನ್ನು ಇಡುವ ಮೂಲಕ ಸಮಾಜಮುಖಿ ಕೈಂಕರ್ಯದಲ್ಲಿ ತೊಡಗಿದ್ದಾರೆ.



ಮಾತೋಶ್ರೀ ಜೊತೆ ಶ್ರೀ ಬಸವರಾಜ ಹೊರಟ್ಟಿ

ವಯಸ್ಸಾದ ತಂದೆ-ತಾಯಂದಿರ ಜೊತೆ ಮಕ್ಕಳು ಒಟ್ಟೊಟ್ಟಾಗಿ ಸಂತಸದಿಂದ ಕಾಲ ಕಳೆಯಬೇಕಾಗಿದೆ. ತಂದೆ-ತಾಯಂದಿರು ತಮ್ಮ ಕೊನೆಯ ದಿನಗಳನ್ನು ಅತ್ಯಂತ ಸಂತಸದಿಂದ ಕಳೆಯುವಂತಹ ವಾತಾವರಣವನ್ನು ನಿರ್ಮಿಸಬೇಕಿದೆ. ಇಂತಹ ಹತ್ತಾರು ಕನಸುಗಳನ್ನು ಕಟ್ಟಿಕೊಂಡಿರುವ ಅವ್ವ ಸೇವಾ ಸಂಸ್ಥೆಯ ಬಳಗ ಕಳೆದ ದಶಕಗಳಿಂದ ಅರ್ಥಪೂರ್ಣ ಕಾರ್ಯಕ್ರಮಗಳನ್ನು ಸಂಘಟಿಸುವ ಮೂಲಕ ಸುಂದರ ಸಮಾಜ ಕಟ್ಟುವ ಕಾರ್ಯದಲ್ಲಿ ತೊಡಗಿದ್ದಾರೆ.

ಸುಂದರ ಸ್ವಾಸ್ಥ್ಯ ಸದೃಢ ಸಮಾಜ ಕಟ್ಟುವಲ್ಲಿ ಇಂತಹ ಕಾರ್ಯಕ್ರಮಗಳ ಅವಶ್ಯಕತೆಯಿದೆ. ಬಸವರಾಜ ಹೊರಟ್ಟಿಯವರ ನೇತೃತ್ವದ ಬಳಗ ಹತ್ತಾರು ವಿಧಾಯಕ ಕಾರ್ಯಕ್ರಮಗಳ ಸಂಘಟಿಸಿ ಸಮಾಜಕ್ಕೊಂದು ಉತ್ತಮ ಸಂದೇಶ ಕೊಡುವ ಪ್ರಯತ್ನ ಮಾಡುತ್ತಾ ಬಂದಿದ್ದಾರೆ. ಅವ್ವನ ಮಹತ್ವದ ಕುರಿತು ಚಿಂತನ-ಮಂಥನಗೈಯಲು ಅವ್ವ ಸೇವಾ ಟ್ರಸ್ಟ ಅವಕಾಶ ಕಲ್ಪಿಸಿಕೊಟ್ಟಿದೆ. ಕಾರ್ಯಕ್ರಮ ಅತ್ಯಂತ ಅರ್ಥಪೂರ್ಣವಾದದ್ದು 'ಅಮ್ಮ'ನ ಮಮತೆ ಪ್ರೀತಿಯ ಕುರಿತು ಸಾಂಸ್ಕೃತಿಕ ಬೀಜ ಬಿತ್ತಬೇಕಿದೆ.

ಈ ಕಾರ್ಯಕ್ರಮ ಇತರರಿಗೆ ಮಾದರಿಯಾಗುವದರ ಜೊತೆ-ಗೆ ಸಮಾಜದಲ್ಲಿ ಸೌಹಾರ್ದತೆ ಹೆಚ್ಚಿಸುವಲ್ಲಿ ಸಹಾಯವಾಗುತ್ತದೆ. ಇಂತಹ ಭಾವನಾತ್ಮಕ ಕಾರ್ಯಕ್ರಮದಲ್ಲಿ ಭಾಗಿಯಾಗುವ ಮೂಲಕ ಅವಿಭಕ್ತ ಕುಟುಂಬದ ಆಶಯಗಳನ್ನು ಗಟ್ಟಿಗೊಳಿಸೋಣ ಹಾಗೂ ಹೆತ್ತವರ ಒಂಟಿತನವನ್ನು ದೂರಮಾಡೋಣ ಬನ್ನಿ. ಹೆತ್ತವರು ಅನಾಥರಂತೆ ಬದುಕುವದಕ್ಕೆ ಮಕ್ಕಳು ಆಸ್ಪದ ನೀಡುವುದು ಎಂದೂ ಕ್ಷಮೆ ಇರದ ಅಪರಾಧ. ಇಂತಹ ಘಟನೆಗಳಿಗೆ ಅವಕಾಶ ಮುಂದೆ ಎಂದೂ ನಡೆಯದಹಾಗೆ ನೋಡಿಕೊಳ್ಳಲು ಇಂತಹ ಕಾರ್ಯಕ್ರಮಗಳು ನಮ್ಮನ್ನು ನಿಮ್ಮನ್ನು ತಿದ್ದಿ ತೀಡಬಹುದು.



ಬನ್ನಿ ತಪ್ಪದೇ ಭಾಗವಹಿಸಿ. ಹೆತ್ತವರ ಜೊತೆಗಿನ ಸಂಬಂಧ ಗಟ್ಟಿಗೊಳಿಸೋಣ.

– ಡಾ.ಬಸವರಾಜ ಧಾರವಾಡ.

## ಕರ ವಸೂಲಾತಿ ಅಭಿಯಾನ ತೆರಿಗೆ ಪಾವತಿಸಲು ವಿನಂತಿ

■ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

ಸಾರ್ವಜನಿಕರು ತಾವು ಬಾಕಿ ಉಳಿಸಿಕೊಂಡಿರುವ ವಿವಿಧ ತೆರಿಗೆಯನ್ನು ಪೂರ್ಣವಾಗಿ ಪಾವತಿಸಿ ಗ್ರಾಮದ ಅಭಿವೃದ್ಧಿಗೆ ಸಹಕಾರ ನೀಡಬೇಕು ಎಂದು ಗ್ರಾಮ ಪಂಚಾಯಿತಿ ಅಧ್ಯಕ್ಷೆ ಕೀರ್ತಿ ಪಾಟೀಲ ವಿನಂತಿಸಿದರು.

ಸಮೀಪದ ಅಡವಿ ಸೋಮಾಪೂರ ಗ್ರಾ.ಪಂ ವ್ಯಾಪ್ತಿಯ ಅಡವಿಸೋಮಾಪೂರ ದೊಡ್ಡ ಮತ್ತು ಸಣ್ಣ ತಾಂಡೆ, ಪಾಪಾನಾಶಿ, ಪಾಪನಾಶಿ ತಾಂಡೆಯಲ್ಲಿ ಕರ ವಸೂಲಾತಿ ಅಭಿಯಾನ ಮಾಸಾಚರಣೆ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಸರಕಾರ ನೀಡುವ ಅನುದಾನದೊಂದಿಗೆ ಗ್ರಾಮದಿಂದ ಬರುವ ತೆರಿಗೆಯು ಬೀದಿ ದೀಪ ನಿರ್ವಹಣೆ, ಸ್ವಚ್ಛತೆ, ಕುಡಿಯುವ ನೀರು ಸೇರಿದಂತೆ ಹಲವು ಮೂಲಭೂತ ಸೌಲಭ್ಯಕ್ಕೆ ಅನುಕೂಲವಾಗುತ್ತದೆ. ಆದ್ದರಿಂದ ಗ್ರಾಮಸ್ಥರು ತಮ್ಮ ಸ್ವ ಇಚ್ಛೆಯಿಂದ ಕರವನ್ನು ಪಾವತಿಸಬೇಕೆಂದು ವಿನಂತಿಸಿಕೊಂಡರು.

ಅಭಿವೃದ್ಧಿ ಅಧಿಕಾರಿ ಅಮೀರನಾಯ್ಕ ಮಾತನಾಡಿ, 2025ರ ಸೆ. 1ರಿಂದ ಮಾರ್ಚ್ 31ರವರೆಗೂ ಕರ ವಸೂಲಾತಿ ಅಭಿಯಾನ ನಡೆಯಲಿದ್ದು, ಮನೆ, ಕಟ್ಟಡ, ನಿವೇಶನ, ಅಂಗಡಿ, ವಾಣಿಜ್ಯ ಮಳಿಗೆ ಮತ್ತು ವಿಶೇಷ ನೀರಿನ ಕರ ಸೇರಿದಂತೆ ವಿವಿಧ ತೆರಿಗೆಯನ್ನು ಸಾರ್ವಜನಿಕರ ಮನವೊಲಿಸಿ ಪಾವತಿಸಿಕೊಳ್ಳಲಾಗುತ್ತಿದೆ. ಅಡವಿಸೋಮಾಪೂರ ಗ್ರಾ.ಪಂ ವ್ಯಾಪ್ತಿಯಲ್ಲಿ 1994ರಿಂದ 2024ರವರೆಗೂ 88 ಲಕ್ಷ ರೂ ಬಾಕಿ ಇದೆ. ಇದರಲ್ಲಿ 18 ಲಕ್ಷ ರೂ ಈ ವರ್ಷದ ಬಾಕಿ ಇದ್ದು, ಇದರಲ್ಲಿ 12.5 ಲಕ್ಷ ರೂ ವಸೂಲಾಗಿದೆ. 4-5 ವರ್ಷದಿಂದ ತೆರಿಗೆಯನ್ನು ಬಾಕಿ ಉಳಿಸಿಕೊಂಡರ ಮನವೊಲಿಸಿ ತೆರಿಗೆ ಪಾವತಿಸಿಕೊಳ್ಳಲಾಗುತ್ತಿದೆ ಎಂದರು.

## ಹನುಮಂತ ಅತ್ಯಂತ ಶಕ್ತಿಶಾಲಿ ದೇವರು

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ



ಹನುಮಂತ ಅತ್ಯಂತ ಶಕ್ತಿಶಾಲಿ ಭಗವಂತ. ಅವನನ್ನು ನಂಬಿ ಪೂಜಿಸಿದರೆ, ಭಜಿಸಿದರೆ ಖಂಡಿತ ಅವನು ನಮ್ಮ ಸಂಕಷ್ಟಗಳನ್ನು ದೂರ ಮಾಡುತ್ತಾನೆ. ನೀವು ಹನುಮ ಮಾಲಾ ಧರಿಸುವ ಮೂಲಕ ಅತ್ಯುತ್ತಮ ಕೆಲಸ ಮಾಡಿದ್ದೀರಿ. ನಿತ್ಯವೂ ಹನುಮನನ್ನು ಪೂಜಿಸುತ್ತಿರುವ ನಿಮ್ಮ ಸಂಕಷ್ಟಗಳೆಲ್ಲ ದೂರವಾಗಿ ನಿಮ್ಮ ಬಾಳಿನಲ್ಲಿ ಎಂದಿಗೂ ಶಾಂತಿ-ಸಮಾಧಾನ ಸಿಗಲಿ ಎಂದು ಜಯಂತಿ ಅಕ್ಕನವರು ಹೇಳಿದರು. ಪಟ್ಟಣದ ಶ್ರೀ ಈಶ್ವರೀಯ ವಿಶ್ವವಿದ್ಯಾಲಯದಲ್ಲಿ ಹನುಮ ಮಾಲಾಧಾರಿಗಳಿಗೆ ಏರ್ಪಡಿಸಿದ್ದ ಔತಣಕೂಟದಲ್ಲಿ ಅವರು ಮಾತನಾಡಿದರು.

ನಿತ್ಯವೂ ನೀವು ಹನುಮನನ್ನು ಅನನ್ಯ ಭಾವದಿಂದ ಪೂಜಿಸುತ್ತಿದ್ದೀರಿ. ಹನುಮಾನ್ ಚಾಲೀಸಾವನ್ನು ಸಹ ನೀವು ಪಠಿಸುತ್ತಿದ್ದೀರಿ. ಹನುಮನಿಗೆ ಇರುವ ಇನ್ನೊಂದು ಹೆಸರೆಂದರೆ, ಸಂಕಟ ಮೋಚನ ಹನುಮಾನ್ ಎಂದು. ಆದ್ದರಿಂದ ಆತ ಎಲ್ಲರ ಸಂಕಟಗಳನ್ನು ದೂರೀಕರಿಸಲಿ ಎಂಬುದು ನಮ್ಮ ಹಾರೈಕೆ ಎಂದರು.

ಸ್ಥಳೀಯ ಈಶ್ವರಿಯ ವಿಶ್ವವಿದ್ಯಾಲಯದ ಸಂಚಾಲಕಿ ಬಿ.ಕೆ. ಸವಿತಕ್ಕ ಮಾತನಾಡಿ, ನರೇಗಲ್ಲ ಪಟ್ಟಣದಲ್ಲಿ ಅನೇಕ ಧಾರ್ಮಿಕ ಕಾರ್ಯಗಳು ನಡೆಯುತ್ತಲೇ ಇರುತ್ತವೆ. ಇಲ್ಲಿ ಹನುಮ ಮಾಲಾಧಾರಿಗಳಿದ್ದಂತೆ ಅಯ್ಯಪ್ಪ ಸ್ವಾಮಿಯ ಭಕ್ತರೂ ಸಹ ಇದ್ದಾರೆ. ಇಂತಹ ಧಾರ್ಮಿಕ ಕಾರ್ಯಗಳಲ್ಲಿ ಯುವಕರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳುತ್ತಿರುವುದು ನಮಗೆಲ್ಲ ಸಂತಸದ ಸಂಗತಿ. ಇದರಿಂದ ಊರು ಶಾಂತಿ, ಸಮಾಧಾನಗಳಿಂದ ಇರುತ್ತದೆ ಎಂದರು.

**ಪಂಚಮಸಾಲಿ ಸಮುದಾಯದ ಜನರ ಮೇಲೆ ಪೊಲೀಸರ ಲಾಠಿಚಾರ್ಜ್‌ಗೆ ಖಂಡನೆ**

# ಪಂಚಮಸಾಲಿ ಸಮಾಜದಿಂದ ಬೃಹತ್ ಪ್ರತಿಭಟನೆ

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಬೆಳಗಾವಿಯಲ್ಲಿ ಪಂಚಮಸಾಲಿ ಸಮುದಾಯದ ಜನರ ಮೇಲೆ ಪೊಲೀಸರು ಲಾಠಿ ಚಾರ್ಜ್ ಮಾಡಿರುವುದನ್ನು ಖಂಡಿಸಿ ಸ್ಥಳೀಯ ಪಂಚಮಸಾಲಿ ಸಮಾಜದವರು ಬಸ್ ನಿಲ್ದಾಣದ ಹತ್ತಿರ ಪ್ರತಿಭಟನೆ ನಡೆಸಿದರು.

ಬೆಳಗಾವಿಯಲ್ಲಿ ನಡೆದ ಪ್ರತಿಭಟನಾ ಸಮಯದಲ್ಲಿ ಪ್ರತಿಭಟನಾಕಾರರ ಮೇಲೆ ಲಾಠಿಚಾರ್ಜ್ ಮಾಡಿದ್ದು ಖಂಡನೀಯ. ಇದಕ್ಕೆ ಕಾರಣರಾದವರನ್ನು ತಕ್ಷಣವೇ ಸರಕಾರ ಅಮಾನತು ಮಾಡಬೇಕೆಂದು ಅಶೋಕ ಬೇವಿನಕಟ್ಟಿ ಆಗ್ರಹಿಸಿದರು. ಅಲ್ಲದೆ ಪ್ರತಿಭಟನೆ ಸಮಯದಲ್ಲಿ ಪ್ರತಿಭಟನಕಾರರ ಮೇಲೆ ವಿನಾಕಾರಣ ದಾಖಲಿಸಿರುವ ಪ್ರಕರಣಗಳನ್ನು ಕೂಡಲೇ ಹಿಂದಕ್ಕೆ ಪಡೆಯಬೇಕು ಎಂದರು. ಸಂವಿಧಾನಬದ್ಧ ಪ್ರತಿಭಟನೆ ಹಕ್ಕನ್ನು ಹತ್ತಿಕ್ಕುವ ಕೆಲಸವನ್ನು ರಾಜ್ಯ ಸರ್ಕಾರ ಮಾಡಿದೆ. ನ್ಯಾಯಯುತ ಬೇಡಿಕೆ ಈಡೇರಿಸುವುದು ಸರ್ಕಾರದ ಕರ್ತವ್ಯ. ಆದರೆ, ಸರ್ಕಾರ ದೌರ್ಜನ್ಯ ಎಸಗಿರುವುದು ಖಂಡನೀಯ. ಮುಖ್ಯಮಂತ್ರಿ ಮತ್ತು ಅವರ ಸಂಪುಟದ ಸಹೋದ್ಯೋಗಿಗಳು ಪಂಚಮಸಾಲಿ ಸಮಾಜಕ್ಕೆ ಕ್ಷಮೆ ಕೇಳಬೇಕು ಎಂದು ಆಗ್ರಹಿಸಿದರು.



ಬಸವರಾಜ ಕೊಟಗಿ ಮಾತನಾಡಿ, ಬೆಳಗಾವಿ ಘಟನೆಯಿಂದ ಇಡೀ ಸಮಾಜಕ್ಕೆ ಅಪಾರ ನೋವಾಗಿದೆ. ಪಂಚಮಸಾಲಿ ಸಮಾಜ ಬಾಂಧವರು ಸಾತ್ವಿಕರು. ಸರ್ಕಾರಕ್ಕೆ ಕೆಟ್ಟ ಹೆಸರು ತರಲು ಹೋರಾಟ ನಡೆಸಿಲ್ಲ. ನ್ಯಾಯಯುತ ಬೇಡಿಕೆ ಈಡೇರಿಸುವಂತೆ ಒತ್ತಾಯ ಮಾಡಲು ಬಂದವರ ಮೇಲೆ ಲಾಠಿಚಾರ್ಜ್ ನಡೆಸಿರುವುದು ಖಂಡನೀಯ ಎಂದರು.

ಶಶಿಧರ ಸಂಕನಗೌಡ್ರ ಮಾತನಾಡಿ, ಪಂಚಮಸಾಲಿ ಸಮಾಜಕ್ಕೆ 2ಎ ಮಿಸಲಾತಿ ಬೇಡಿಕೆ ಇಟ್ಟಿದ್ದು ಇಂದು ನಿನ್ನೆಯದಲ್ಲ. ಹಿಂದಿನ ಯಾವುದೇ ಸರ್ಕಾರ ನಮ್ಮ ಸಮಾಜದ ಮೇಲೆ ದೌರ್ಜನ್ಯ, ಲಾಠಿಚಾರ್ಜ ಮಾಡಿಲ್ಲ. ನಮ್ಮ ಹಕ್ಕು ಕೇಳಿದ್ದಕ್ಕೆ ಬೆಳಗಾವಿಯಲ್ಲಿ ಲಾಠಿಚಾರ್ಜ್ ನಡೆಸಿ ಸಮಾಜದವರ ಮೇಲೆ ಪ್ರಕರಣ ದಾಖಲಿಸಿದ್ದಾರೆ. ಇದು ಖಂಡನೀಯ ಎಂದರು.

ಪ್ರತಿಭಟನೆಯಲ್ಲಿ ಗಂಗಾಧರ ಕೊಟಗಿ, ಮಲ್ಲಿಕಾರ್ಜುನ ಭೂಮನಗೌಡ್ರ, ಮುದಿಯಪ್ಪ ಮುಗಳಿ, ಶ್ರೀಶೈಲಪ್ಪ ಬಂಡಿಹಾಳ, ಚನ್ನಬಸಪ್ಪ ಕುಷ್ಟಗಿ, ಮುತ್ತಣ್ಣ ಪಲ್ಲೇದ, ಚನ್ನಪ್ಪ ಮ್ಯಾಗೇರಿ, ವಿರಣ್ಣ ಧರಣೆಪ್ಪಗೌಡ್ರ, ಕಲ್ಮೇಶ ತೊಂಡಿಹಾಳ, ಆನಂದ ಕೊಟಗಿ, ಸಂಗಪ್ಪ ಕಾಮನಕೆರಿ, ಪ್ರಭುಗೌಡ ನಾಡಗೌಡ, ಮಂಜುನಾಥ ಪಾಯಪ್ಪಗೌಡ್ರ, ಮಾಲಿಂಗಪ್ಪ ಮ್ಯಾಗೆರಿ, ರುದ್ರೇಶ ಕೊಟಗಿ, ವೀರಪ್ಪ ಜಿರ್ಲ, ನಿಂಗಪ್ಪ ಕಣವಿ, ಪರಪ್ಪ ದಿಂಡೂರ, ಉಮೇಶ ಸಂಕನಗೌಡ್ರ, ಸಿದ್ದಣ್ಣ ನರಗುಂದ, ಬಸವರಾಜ ಕಲಾಲಬಂಡಿ, ಶ್ರೀಕಾಂತ ಬೆಡಗಲ್, ಶರಣಪ್ಪ ಬೆಟಗೇರಿ, ಮಂಜುನಾಥ ಕಮಲಾಪೂರ, ಸತೀಶ ಮಾಳವಾಡ, ಅರವಿಂದ ಕಡೆತೋಟದ, ಅಶೋಕ ಕಲ್ಲೂರ, ಬಸಪ್ಪ ಹಕಾರಿ ಸೇರಿದಂತೆ ಪಂಚಮಸಾಲಿ ಸಮಾಜದವರಿದ್ದರು.

### ಉಪತಹಸೀಲ್ದಾರರ ಮೇಲೆ ಕ್ರಮಕ್ಕೆ ಆಗ್ರಹ

ಪ್ರತಿಭಟನಾಕಾರರು ಮನವಿ ಸಲ್ಲಿಸಲು ಅದೆಷ್ಟೇ ಕಾಯ್ದರೂ ಬೇಗನೆ ಬಾರದ ಉಪತಹಸೀಲ್ದಾರರ ಮೇಲೆ ಸೂಕ್ತ ಕ್ರಮ ಜರುಗಿಸಬೇಕೆಂದು ಪ್ರತಿಭಟನಾಕಾರರು ಡಿ.ಸಿ.ಯವರಿಗೆ ಮನವಿ ಅರ್ಪಿಸಿದರು.

ಈ ಬಗ್ಗೆ ಪ್ರತಿಕ್ರಿಯಿಸಿದ ನರೇಗಲ್ಲ ಉಪತಹಸೀಲ್ದಾರ ಎಸ್.ಜಿ. ದೊಡ್ಡಮನಿ, ನಾನು ಉದ್ದೇಶಪೂರ್ವಕವಾಗಿ ತಡಮಾಡಿ ಬಂದಿಲ್ಲ. ಜರೂರಿನ ಕಾರ್ಯ ನಿಮಿತ್ತ ನಾನು ಜಿಲ್ಲಾ ಕಚೇರಿಗೆ ತೆರಳಿದ್ದರಿಂದ ಬರಲು ತಡವಾಯಿತು. ಅದಕ್ಕಾಗಿ ಎಲ್ಲರಲ್ಲಿ ಕ್ಷಮೆ ಯಾಚಿಸುತ್ತೇನೆ ಎಂದರು.

## ಕೊಟ್ಟೂರ ಬಸವೇಶ್ವರ ಜಾತ್ರೆ ನಾಳೆ



■ವಿಜಯಸಾಕ್ಷಿ ಸುದ್ದಿ, ಗದಗ

ಕೊಟ್ಟೂರ ಸುಕ್ಷೇತ್ರದ ಶ್ರೀಗುರು ಬಸವೇಶ್ವರ ಸ್ವಾಮಿ ದೇವಸ್ಥಾನದ ಕಾರ್ತಿಕೋತ್ಸವ ಹಾಗೂ ಬೆಳ್ಳಿ ರಥೋತ್ಸವವು ಡಿ. 16ರಂದು ಸೋಮವಾರ ಸಂಜೆ ಸಕಲ ವಾದ್ಯವೈಭವದೊಂದಿಗೆ ಜರುಗಲಿದೆ. ಸರ್ವ ಭಕ್ತಾಧಿಗಳು ದೇವಸ್ಥಾನದಲ್ಲಿ ಜರುಗಲಿರುವ ಎಲ್ಲ ಧಾರ್ಮಿಕ ಕಾರ್ಯಕ್ರಮಗಳಲ್ಲಿ ಪಾಲ್ಗೊಳ್ಳಬೇಕೆಂದು ಬಸವರಾಜ ಕೊರ್ಲಹಳ್ಳಿ ಪತ್ರಿಕಾ ಪ್ರಕಟಣೆಯಲ್ಲಿ ವಿನಂತಿಸಿದ್ದಾರೆ.

## ಗದಗ ಜಿಲ್ಲೆಗೆ ಇಂದು ಡಿಸಿಎಂ ಡಿ.ಕೆ ಶಿವಕುಮಾರ



■ವಿಜಯಸಾಕ್ಷಿ ಸುದ್ದಿ, ಗದಗ

ಉಪಮುಖ್ಯಮಂತ್ರಿ ಡಿ. ಕೆ ಶಿವಕುಮಾರ ಅವರು ಡಿಸೆಂಬರ್ 15ರಂದು ಗದಗ ಜಿಲ್ಲಾ ಪ್ರವಾಸ ಕೈಗೊಳ್ಳಲಿದ್ದು, ವಿವರ ಈ ಕೆಳಗಿನಂತಿದೆ.

ಡಿಸೆಂಬರ್ 15ರಂದು ಮಧ್ಯಾಹ್ನ 1 ಗಂಟೆಗೆ ಮುಖ್ಯಮಂತ್ರಿಗಳೊಂದಿಗೆ ರೋಣ ಪಟ್ಟಣಕ್ಕೆ ಆಗಮಿಸಿ ರೋಣ ವಿಧಾನಸಭಾ ಕ್ಷೇತ್ರಕ್ಕೆ ಸಂಬಂಧಿಸಿದ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಶಂಕುಸ್ಥಾಪನೆ ಮತ್ತು ಉದ್ಘಾಟನಾ ಕಾರ್ಯಕ್ರಮದಲ್ಲಿ ಭಾಗವಹಿಸುವುದು. ಸಾಯಂಕಾಲ 4 ಗಂಟೆಗೆ ರೋಣ ಪಟ್ಟಣದಿಂದ ನಿರ್ಗಮಿಸುವರು ಎಂದು ಉಪಮುಖ್ಯಮಂತ್ರಿಗಳ ಕಾರ್ಯಾಲಯದ ಪ್ರಕಟಣೆ ತಿಳಿಸಿದೆ.

**ಶಿವಾನುಭವ ಕಾರ್ಯಕ್ರಮದಲ್ಲಿ ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳು**

# ದಯವಿರಬೇಕು ಸಕಲ ಪ್ರಾಣಿಗಳಲಿ

■ವಿಜಯಸಾಕ್ಷಿ ಸುದ್ದಿ, ಗದಗ

ಮಣ್ಣಿನ ಸವಕಳಿಯನ್ನು ಸಂರಕ್ಷಣೆ ಮಾಡಬೇಕು. ಮಣ್ಣಿನ ಸವೆತವನ್ನು ಕಡಿಮೆ ಮಾಡಿ, ಮಣ್ಣಿನ ಗುಣಮಟ್ಟವನ್ನು ಕಾಪಾಡಿಕೊಳ್ಳಬೇಕು. ನೀರು, ಗಾಳಿ, ಆಹಾರದಂತೆ ಮಣ್ಣು ಕೂಡ ಅಗತ್ಯವಾಗಿದೆ ಎಂದು ಡಾ. ತೋಂಟದ ಸಿದ್ದರಾಮ ಮಹಾಸ್ವಾಮಿಗಳು ಹೇಳಿದರು.

ಲಿಂಗಾಯತ ಪ್ರಗತಿಶೀಲ ಸಂಘದ 2723ನೇ ಶಿವಾನುಭವ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಮಾತನಾಡಿದ ಶ್ರೀಗಳು, ಮಾನವನ ದುರಾಸೆಯಿಂದ ಮಣ್ಣು ಸವಕಳಿಯಾಗುತ್ತಲೇ ಇದೆ. ಜನರಲ್ಲಿ ಜಾಗೃತಿ ಮೂಡಿಸಲು ಡಿಸೆಂಬರ್ 5ರಂದು ವಿಶ್ವ ಮಣ್ಣಿನ ದಿನ ಆಚರಿಸಲಾಗುತ್ತದೆ. ಮಣ್ಣಿಗೂ ಕಾಡಿಗೂ ಅವಿನಾಭಾವ ಸಂಬಂಧವಿದೆ. ಮಣ್ಣಿದ್ದರೆ ಕಾಡು. ಕಾಡುಗಳಿದ್ದರೆ ವನ್ಯಪ್ರಾಣಿಗಳು. ವನ್ಯಪ್ರಾಣಿಗಳ ಸಂರಕ್ಷಣೆ ನಮ್ಮ ಧ್ಯೇಯವಾಗಬೇಕು. ಅದಕ್ಕೆ ಬಸವಣ್ಣನವರು ದಯವಿರಬೇಕು ಸಕಲ ಪ್ರಾಣಿಗಳಲ್ಲಿ ಎಂದು ಹೇಳಿದ್ದಾರೆ.

ಚರ್ಮ-ತುಪ್ಪಳಕ್ಕಾಗಿ ಪ್ರಾಣಿಗಳನ್ನು ಕೊಲ್ಲಲಾಗುತ್ತದೆ. ಕಾಡಿನಲ್ಲಿ ಹಾಯಾಗಿ ಅಡ್ಡಾಡಿಕೊಂಡು ಇರುವ ಪ್ರಾಣಿಗಳ ವಾಸಸ್ಥಾನ ಕಾಡು. ಅದನ್ನೇ ಕಡಿದು ತೋಟ ಮಾಡುತ್ತಾರೆ. ಕಾಡಿಲ್ಲದೆ ಪ್ರಾಣಿಗಳು ಆಹಾರಕ್ಕಾಗಿ ನಾಡಿಗೆ ಬಂದರೆ ಅವುಗಳು ಮಾನವರಿಗೆ ತೊಂದರೆ ಕೊಡುತ್ತವೆಂದು ಕೊಲ್ಲುತ್ತೇವೆ ಎಂದು ವಿಷಾದಿಸಿದರು. ಅದರ ಜಾಗೃತಿಗಾಗಿ ಪ್ರತಿವರ್ಷ ಡಿಸೆಂಬರ್ 4ರಂದು ವನ್ಯಜೀವಿ ಸಂರಕ್ಷಣಾ ದಿನವನ್ನು ಆಚರಿಸಲಾಗುತ್ತದೆ. ಮನುಕುಲದ ಉಳಿವಿಗಾಗಿ ಈ ಜಗದ ಮಣ್ಣು, ಕಾಡು ಹಾಗೂ ವನ್ಯಪ್ರಾಣಿಗಳ ಸಂರಕ್ಷಣೆ ಅಗತ್ಯವೆಂದರು.



ವಕೀಲರ ದಿನಾಚರಣೆ ಅಂಗವಾಗಿ ಹಿರಿಯ ವಕೀಲರಾದ ಎಸ್.ಎಸ್. ಶೆಟ್ಟರ ಹಾಗೂ ಶ್ರೀದೇವಿ ಎಸ್.ಶೆಟ್ಟರ ಅವರನ್ನು ಸಂಮಾನಿಸಲಾಯಿತು. ವಿಶ್ವ ವಿಶೇಷ ಚೇತನರ ದಿನಾಚರಣೆ ಅಂಗವಾಗಿ ಆನಂದ ತುಕಾರಾಮ ಬೇಂದ್ರೆ ಅವರನ್ನು ಸಂಮಾನಿಸಲಾಯಿತು.

ವಚನ ಸಂಗೀತವನ್ನು ಮೃತ್ಯುಂಜಯ ಹಿರೇಮಠ ಹಾಗೂ ಗುರುನಾಥ್ ಸುತಾರ ನೆರವೇರಿಸಿದರು. ಧರ್ಮಗ್ರಂಥ ಪಠಣವನ್ನು ತ್ರಿಷಾ ಆರ್.ಹಬೀಬ್ ಹಾಗೂ ವಚನ ಚಿಂತನವನ್ನು ಶ್ರೇಯಸ್ ಜೆ.ಅಂಗಡಿ ನಡೆಸಿಕೊಟ್ಟರು. ದಾಸೋಹ ಸೇವೆಯನ್ನು ಗಜೇಂದ್ರಗಡದ ಶೇಖರಪ್ಪ ಎಸ್.ಬಾಗೂರು ಹಾಗೂ ಕುಟುಂಬ ವರ್ಗದವರು ವಹಿಸಿಕೊಂಡಿದ್ದರು.

ಲಿಂಗಾಯತ ಪ್ರಗತಿಶೀಲ ಸಂಘದ ಅಧ್ಯಕ್ಷ ಬಾಲಚಂದ್ರ ಭರಮಗೌಡ್ರ, ಕಾರ್ಯದರ್ಶಿ ವೀರಣ್ಣ ಗೋಟಡಕಿ, ಸಮಿತಿಯ ಚೆರಮನ್ ಐ.ಬಿ. ಬೆನಕೊಪ್ಪ ಹಾಗೂ ಸರ್ವಸದಸ್ಯರು ಉಪಸ್ಥಿತರಿದ್ದರು. ಶಿವಾನಂದ ಹೊಂಬಳ ಸ್ವಾಗತ ಕೋರಿದರೆ, ಡಾ. ಉಮೇಶ್ ಪುರದ ಪರಿಚಯಿಸಿದರು. ಮಂಜುಳಾ ಹಾಸಲಕರ ಕಾರ್ಯಕ್ರಮ ನಿರೂಪಿಸಿದರು.

ಉಪನ್ಯಾಸಕರಾಗಿ ಆಗಮಿಸಿದ ಧಾರವಾಡದ ಅಪರ ಆಯುಕ್ತಾಲಯದ ನಿವೃತ್ತ ನಿರ್ದೇಶಕರಾದ ಸಿದ್ಧರಾಮ ಮನಹಳ್ಳಿ ಮಾತನಾಡಿ, ಬಸವಣ್ಣನವರ ವಚನಗಳಲ್ಲಿ ಪ್ರಾಣಿಗಳ ಪರಿಕಲ್ಪನೆ ಬಗ್ಗೆ ತಿಳಿಸಿದರು. ಮಣ್ಣಿನ ಬಣ್ಣ ತಾವು ತೊಟ್ಟು, ತಮ್ಮ ಬಣ್ಣ ಮಣ್ಣಿಗೆ ಕೊಟ್ಟು ಪ್ರಗತಿಪರ ಕೃಷಿಕ ಮಹಿಳೆಯರ ಸಾಧನೆಯ ಕಥೆಯನ್ನು ಮನೋಜ್ಞವಾಗಿ ತಿಳಿಸಿದರು. ಹಾಗೆಯೇ ಮಣ್ಣು ಸಂರಕ್ಷಣೆಯಿಂದ ಕಾಡಿನ ಸಂರಕ್ಷಣೆ. ಅದರಿಂದ ವನ್ಯಜೀವಿ ಸಂರಕ್ಷಣೆಯಾಗುತ್ತದೆ. ಎಲ್ಲಾ ಜೀವಿಗಳಿಗೂ ಜೀವಿಸುವ ಹಕ್ಕಿದೆ. ರಕ್ಷಣೆ ನಮ್ಮೆಲ್ಲರ ಕರ್ತವ್ಯವಾಗಬೇಕು ಎಂದರು.

## ರಸ್ತೆ ಕಾಮಗಾರಿಗೆ ಭೂಮಿಪೂಜೆ



■ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ನಗರಸಭೆ ವಾರ್ಡ್ ನಂ. 11ರಲ್ಲಿ ನಗರಸಭೆ ನಗರೋತ್ಥಾನ ಅನುದಾನದಲ್ಲಿ ಅನುಷಾ ಕಿರಾಣಿ ಅಂಗಡಿಯಿಂದ ಗಾಣಿಗ ಸಮುದಾಯ ಭವನದವರೆಗೆ ರಸ್ತೆ ನಿರ್ಮಾಣ ಕಾಮಗಾರಿಯ ಭೂಮಿಪೂಜೆಯನ್ನು ಶಕುಂತಲಾಬಾಯಿ ಬಿ.ದಂಡಿನ ಹಾಗೂ ನಗರಸಭಾ ಸದಸ್ಯೆ ಶ್ವೇತಾ, ಡಾ. ಪುನೀತ ಬೆನಕನವಾರಿ ನೆರವೇರಿಸಿದರು.

ಕಾರ್ಯಕ್ರಮದ ಮುಖ್ಯ ಅತಿಥಿಗಳಾಗಿ ಆಗಮಿಸಿದ ಭಾರತೀಯ ಜನತಾ ಪಾರ್ಟಿಯ ಗದಗ ಜಿಲ್ಲಾಧ್ಯಕ್ಷ ರಾಜು ಕುರುಡಗಿ ಮಾತನಾಡಿ, ವಾರ್ಡ್ ನಂ. 11ರಲ್ಲಿ ನಗರಸಭೆ ಸದಸ್ಯೆ ಶ್ವೇತಾ ದಂಡಿನವರು ನಗರಸಭೆಯ ಅನುದಾನದಲ್ಲಿ ಹಲವಾರು ಕಾಮಗಾರಿಗಳನ್ನು ಜಾರಿಗೆ ತಂದು ಸಾರ್ವಜನಿಕರಿಗೆ ಅನುಕೂಲವಾಗುವಂತೆ ಕಾರ್ಯನಿರ್ವಹಿಸುತ್ತಿರುವುದು ಶ್ಲಾಘನೀಯ ಸಂಗತಿಯಾಗಿದೆ ಎಂದರು.

ಈ ಸಂದರ್ಭದಲ್ಲಿ ವಿ.ಕೆ. ಗುರುಮಠ, ಶಂಕರ, ಸುಧೀರ ಹಾನಗಲ್ ಸಹೋದರರು, ನಗರಸಭಾ ಸದಸ್ಯ ಅನಿಲ ಅಬ್ಬಿಗೇರಿ, ಬಿ.ಎನ್. ಯರನಾಳ, ಎಸ್.ಎಸ್. ಕೊಪ್ಪಳ, ವಿ.ವಿ. ತಿರ್ಲಾಪೂರ, ಬಿ.ಎಂ. ಕನಕೇರಿ, ರುದ್ರೇಶ ಅಳವಂಡಿ, ಗುತ್ತಿಗೆದಾರರಾದ ವಿನಯಕುಮಾರ ಪಾಟೀಲ, ಸಂಕೇತ ರವಿ ದಂಡಿನ, ಆರ್.ಬಿ. ಅಂದಪ್ಪನವರ, ಪ್ರೊ. ಎ.ಕೆ. ಪೂಜಾರ, ಪ್ರೊ. ವಿ.ಕೆ. ಕೊಳ್ಳಿ, ಶರಣಬಸವ ವೆಂಕಟಾಪೂರ, ಎಸ್. ಎಫ್. ಜಕಬಾಳ, ಸೋಮಲಿಂಗಪ್ಪ ಬೆನಕನವಾರಿ, ಶ್ರೀಮತಿ ಪುಷ್ಪಾ ಭಂಡಾರಿ, ಸುಮಾ ನಾರಪ್ಪನವರ, ಸುಮಾ ಮಕ್ಕಣ್ಣವರ, ಚೇತನಾ ಉಪ್ಪಿನ, ಅನುರಾಧಾ ಸಾಲಿ ಸೇರಿದಂತೆ ವಾರ್ಡಿನ ಹಿರಿಯರು, ಮುಖಂಡರು, ಮಹಿಳೆಯರು ಉಪಸ್ಥಿತರಿದ್ದರು.

## ವಾತ್ಸಲ್ಯ ಕಾರ್ಯಕ್ರಮ ನೊಂದವರ ಆಶಾಕಿರಣ

■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ವತಿಯಿಂದ ತಾಲೂಕಿನಲ್ಲಿ ಡಾ. ವೀರೇಂದ್ರ ಹೆಗ್ಗಡೆ ಮತ್ತು ಹೇಮಾವತಿ ಅಮ್ಮನವರ ಸೂಚನೆಯಂತೆ ನೊಂದವರ ಬಾಳಿನ ಆಶಾಕಿರಣದ ಸಲುವಾಗಿ ವಾತ್ಸಲ್ಯ ಕಾರ್ಯಕ್ರಮದ ಮೂಲಕ ಕಿಟ್‌ಗಳನ್ನು ವಿತರಿಸಲಾಗುತ್ತಿದೆ ಎಂದು ಶಿರಹಟ್ಟಿ/ಲಕ್ಷ್ಮೇಶ್ವರ ತಾಲೂಕು ಕ್ಷೇತ್ರ ಯೋಜನಾಧಿಕಾರಿ ಪುನೀತ್ ಓಲೇಕಾರ ಹೇಳಿದರು.

ಅವರು ಶಿರಹಟ್ಟಿ ತಾಲೂಕಿನ ಬೆಳ್ಳಟ್ಟಿ ಗ್ರಾ.ಪಂ ವ್ಯಾಪ್ತಿಯಲ್ಲಿ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ವತಿಯಿಂದ ವಾತ್ಸಲ್ಯ ಕಿಟ್‌ಗಳನ್ನು ವಿತರಿಸಿ ಮಾತನಾಡಿದರು.



ಸಂಸ್ಥೆಯ ವತಿಯಿಂದ ನೀಡಿರುವ ಕಿಟ್‌ನ್ನು ಉತ್ತಮ ರೀತಿಯಲ್ಲಿ ಬಳಕೆ ಮಾಡಿಕೊಳ್ಳಬೇಕು. ನಿತ್ಯ ಜೀವನ ನಿರ್ವಹಣೆಗೆ ಅಗತ್ಯವಿರುವ ಪಾತ್ರೆ, ಚಾಪೆ ಬಟ್ಟೆಗಳನ್ನೊಳಗೊಂಡ ಕಿಟ್‌ಗಳನ್ನು ವಿತರಿಸಲಾಗಿದೆ.

ಜೊತೆಗೆ ಅಪೌಷ್ಟಿಕತೆಯಿಂದ ಬಳಲುತ್ತಿರುವ ಫಲಾನುಭವಿಗಳಿಗೆ ಆಹಾರ ಜೀರ್ಣಶಕ್ತಿ ಕಡಿಮೆಯಾಗಿರುವುದನ್ನು ಗಮನಿಸಿ ಪ್ರತಿ ತಿಂಗಳು ಅಂತವರಿಗೆ ಅಕ್ಕಿ, ಗೋಧಿ, ರಾಗಿ ಮತ್ತು ಹೆಸರು ಕಾಳು ಮಿಶ್ರಿತ ಸಿರಿ ವಾತ್ಸಲ್ಯ ಕಿಟ್‌ಗಳನ್ನು ವಿತರಿಸಿ ಪ್ರತಿನಿತ್ಯ ಸೇವನೆ ಮಾಡಲು ಸಲಹೆ ನೀಡಲಾಗಿದೆ. ವಾತ್ಸಲ್ಯ ಕಾರ್ಯಕ್ರಮದಡಿ ತೀವ್ರ ಆರ್ಥಿಕ ಸಂಕಷ್ಟದಲ್ಲಿರುವ ನಿರ್ಗತಿಕರು, ಅಸಹಾಯಕರು, ಗಂಭೀರ ಅನಾರೋಗ್ಯ ಪೀಡಿತರಿಗೆ ಪ್ರತಿ ತಿಂಗಳು 1 ಸಾವಿರದಂತೆ 34 ಜನ ಅಶಕ್ತರಿಗೆ ಮಾಸಾಶನ ನೀಡಲಾಗುತ್ತಿದೆ ಎಂದರು. ಈ ಸಂದರ್ಭದಲ್ಲಿ ಬೆಳ್ಳಟ್ಟಿ ಗ್ರಾ.ಪಂ ಅಧ್ಯಕ್ಷ ರಮೇಶ ನಿರ್ವಾಣಶೆಟ್ಟರ, ತಾಲೂಕು ಸಮನ್ವಯಾಧಿಕಾರಿ ಮಮತಾ, ವಲಯ ಮೇಲ್ವಿಚಾರಕ ಗಂಗಾಧರ ಪಾಮರೆಡ್ಡಿ, ಶಾಂತಾ ಬೆನಕೊಪ್ಪ, ಗಂಗೋತ್ರಿ ಗೌಡ, ಮಹಾದೇವಿ ಕಿಗ್ಗಣ್ಣವರ, ಶ್ರೀನಿವಾಸ ಪತ್ತಾರ, ಪುಷ್ಪಾ ಹಿರೇಮಠ, ದಾವಲಬಿ ಚೆಂಚಲಿ ಮುಂತಾದವರು ಉಪಸ್ಥಿತರಿದ್ದರು.

## ನೇಕಾರರ ಬೇಡಿಕೆ ಈಡೇರಿಕೆಗೆ ಸುವರ್ಣಸೌಧ ಚಲೋ

■ವಿಜಯಸಾಕ್ಷಿ ಸುದ್ದಿ, ಬೆಳಗಾವಿ/ಗದಗ

ಕರ್ನಾಟಕ ರಾಜ್ಯ ನೇಕಾರ ಸೇವಾ ಸಂಘ ಹಾಗೂ ಗದಗ-ಬೆಟಗೇರಿಯ ವೃತ್ತಿಪರ ನೇಕಾರರು ರಾಜ್ಯದ ಎಲ್ಲಾ ನೇಕಾರರೊಂದಿಗೆ ಶುಕ್ರವಾರ ಬೆಳಗಾವಿ ಸುವರ್ಣಸೌಧ ಚಲೋ ಹೋರಾಟದಲ್ಲಿ ಭಾಗಿಯಾದರು.

ನೇಕಾರರ ಬೇಡಿಕೆಗಳು ಇತ್ಯರ್ಥವಾಗುವವರೆಗೂ ನಮ್ಮ ಹೋರಾಟ ಮುಂದುವರೆಯುತ್ತದೆ. ಆತ್ಮಹತ್ಯೆ ಮಾಡಿಕೊಂಡ 53 ಜನ ನೇಕಾರರ ಕುಟುಂಬಕ್ಕೆ 10 ಲಕ್ಷ ರೂಪಾಯಿ ಪರಿಹಾರವನ್ನು ಕೊಡಬೇಕು, 55 ವರ್ಷ ಮೇಲ್ಪಟ್ಟ ನೇಕಾರರಿಗೆ ಮಾಸಿಕ 5000 ಪಿಂಚಣಿ, ಕಟ್ಟಡ ಕಾರ್ಮಿಕರ ಮಾದರಿಯಲ್ಲಿ ನೇಕಾರರನ್ನೂ ಕಾರ್ಮಿಕರೆಂದು ಪರಿಗಣಿಸಿ ಸೌಲಭ್ಯಗಳನ್ನು ಒದಗಿಸಬೇಕು. ನಿವೇಶನ ಇಲ್ಲದವರಿಗೆ ನಿವೇಶನ ಹಂಚಿಕೆಯಾಗಬೇಕು. ನೇಕಾರಿಕೆ ವೃತ್ತಿಯು ಅಸ್ಥಿರತೆಯ




ಮಾರುಕಟ್ಟೆಯಿಂದ ಅವನತಿಯ ಅಂಚಿಗೆ ಬಂದು ತಲುಪಿದೆ. ಹಾಗಾಗಿ ಸರಕಾರ ನೇಕಾರರ ಬೇಡಿಕೆಗಳನ್ನು ಪರಿಶೀಲನೆ ಮಾಡಿ, ನಮ್ಮೆಲ್ಲ ಬೇಡಿಕೆಗಳು ಕಟ್ಟಕಡೆಯ ನೇಕಾರನಿಗೂ ತಲುಪುವಂತೆ ಮಾಡಬೇಕು ಎಂದು ಕರ್ನಾಟಕ ರಾಜ್ಯ ನೇಕಾರ ಸೇವಾ ಸಂಘದ ರಾಜ್ಯಾಧ್ಯಕ್ಷರಾದ ಶಿವಲಿಂಗ ಟಿರಕಿ ಸರ್ಕಾರಕ್ಕೆ ಒತ್ತಾಯಿಸಿದರು.

ವಿಧಾನಪರಿಷತ್ ಸದಸ್ಯರಾದ ಕೇಶವ ಪ್ರಸಾದ್ ನೇಕಾರರ ಅಹವಾಲುಗಳನ್ನು ಸ್ವೀಕರಿಸಿ, ನಿಮ್ಮ ಬೇಡಿಕೆಗಳನ್ನು ಸರ್ಕಾರ ಮಟ್ಟದಲ್ಲಿ ಇತ್ಯರ್ಥಪಡಿಸಲು ಪ್ರಾಮಾಣಿಕವಾಗಿ ಪ್ರಯತ್ನಿಸುತ್ತೇನೆ ಎಂದು ಭರವಸೆ ನೀಡಿದರು. ನಂತರ ಕೆಎಚ್‌ಡಿಸಿ ನಿಗಮದಲ್ಲಿ ನೂರಾರು ಕೋಟಿ ಹಗರಣವನ್ನು ತನಿಖೆ ಮಾಡುವಂತೆ ಕೆಎಚ್‌ಡಿಸಿಯ ನೇಕಾರರು ಆಗ್ರಹಿಸಿದರು. ಸರ್ಕಾರದ ಪರವಾಗಿ ನೇಕಾರರ ಅಹವಾಲುಗಳನ್ನು ಸ್ವೀಕರಿಸಲು ಉನ್ನತ ಶಿಕ್ಷಣ ಸಚಿವರಾದ ಡಾ. ಎಂ.ಸಿ. ಸುಧಾಕರ್ ಪ್ರತಿಭಟನಾ ಸ್ಥಳಕ್ಕೆ ಆಗಮಿಸಿದಾಗ ಸರಕಾರದ ಪರವಾಗಿ ತಮ್ಮ ಬೇಸರವನ್ನು ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಕರ್ನಾಟಕ ರಾಜ್ಯ ನೇಕಾರ ಸೇವಾ ಸಂಘದ ರಾಜ್ಯಾಧ್ಯಕ್ಷ ಶಿವಲಿಂಗ ಟಿರಕಿ, ರಾಜು ದಡಿ, ಮಾಧುಸಾ ಮೇರವಾಡೆ, ವಿರೂಪಾಕ್ಷ ಐಲಿ, ಬಸವರಾಜ್ ಕರಿ, ಪ್ರಕಾಶ್ ಹಿಂಡಿ, ನಾರಾಯಣ ಗೋಟೂರ, ಕೃಷ್ಣ ಕೊಪ್ಪರದ, ನಾರಾಯಣಪ್ಪ ಕೋಣಿ, ಹುಲಕುಂಟೆಪ್ಪ ಗೋಟೂರ, ಶಂಕ್ರಪ್ಪ ಮಾದಗುಂಡಿ, ಕರ್ನಾಟಕ ರಾಜ್ಯ ನೇಕಾರ ಸೇವಾ ಸಂಘ ಹಾಗೂ ಗದಗ-ಬೆಟಗೇರಿ ಮತ್ತು ರಾಜ್ಯದ ಎಲ್ಲಾ ವೃತ್ತಿಪರ ನೇಕಾರ ಬಾಂಧವರು ಭಾಗಿಯಾಗಿದ್ದರು.

## ಪಿಂಚಣಿ ಬೇಡಿಕೆ ಈಡೇರಿಕೆಗೆ ಧರಣಿ ಸತ್ಯಾಗ್ರಹ



■ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯದ ಅನುದಾನಿತ ಶಾಲೆ, ಕಾಲೇಜುಗಳಲ್ಲಿ 2006ರ ಪೂರ್ವ ಸೇವೆಗೆ ಸೇರಿ ನಂತರದಲ್ಲಿ ಅನುದಾನಕ್ಕೊಳಪಟ್ಟಿರುವ ಮತ್ತು ಅನುದಾನಿತ ಶಾಲೆ-ಕಾಲೇಜುಗಳಲ್ಲಿ 2006ರ ಬಳಿಕ ಸೇವೆಗೆ ಸೇರಿ ಅನುದಾನಕ್ಕೊಳಪಟ್ಟಿರುವ ನೌಕರರಿಗೆ ಕಾಂಗ್ರೆಸ್ ಪಕ್ಷದ ಚುನಾವಣಾ ಪೂರ್ವ ಪ್ರಣಾಳಿಕೆಯಲ್ಲಿ ಭರವಸೆ ನೀಡಿರುವಂತೆ ಹಳೆಯ ನಿಶ್ಚಿತ ಪಿಂಚಣಿ (ಓ.ಪಿ.ಎಸ್.) ಸೌಲಭ್ಯ ಒದಗಿಸುವಂತೆ ಒತ್ತಾಯಿಸಿ ರಾಜ್ಯ ಅನುದಾನಿತ ಶಾಲೆ-ಕಾಲೇಜುಗಳ ಪಿಂಚಣಿ ವಂಚಿತ ನೌಕರರ ಸಂಘ ಹಾಗೂ ರಾಜ್ಯದ ಎಲ್ಲ ಅನುದಾನಿತ ಶಾಲಾ-ಕಾಲೇಜುಗಳ ನೌಕರ ಸಂಘಟನೆಗಳ ಸಹಯೋಗದಲ್ಲಿ ಬೆಳಗಾವಿ ಸುವರ್ಣಸೌಧದಲ್ಲಿ ನಡೆಯುತ್ತಿರುವ ಚಳಿಗಾಲ ಅಧಿವೇಶನ ವೇಳೆ ಡಿ.17ರಂದು ಸಾವಿರಾರು ನೌಕರರು ಸೇರಿ ಬೃಹತ್ ಹೋರಾಟ ನಡೆಸುವ ಮೂಲಕ ಸರಕಾರಕ್ಕೆ ಅಂತಿಮ ಗಡುವು ನೀಡಲು ನಿರ್ಧರಿಸಿದ್ದಾರೆ.

ಶನಿವಾರ ನಗರದ ಭೂಮರಡ್ಡಿ ಸರ್ಕಲ್‌ನಲ್ಲಿರುವ ಶ್ರೀ ಜಗದ್ಗುರು ತೋಂಟದಾರ್ಯ ಪ್ರಾಥಮಿಕ ಮತ್ತು ಪ್ರೌಢಶಾಲೆಯಲ್ಲಿ ನಡೆದ ಪೂರ್ವಭಾವಿ ಸಭೆಯಲ್ಲಿ ಈ ತೀರ್ಮಾನ ಕೈಗೊಳ್ಳಲಾಯಿತು. ಸಭೆಯಲ್ಲಿ ಕನಕದಾಸ ಶಿಕ್ಷಣ ಸಮಿತಿಯ ಅಧ್ಯಕ್ಷ ರವಿ ದಂಡಿನ, ಈರಣ್ಣ ಹಾದಿಮನಿ, ಬಿ.ಎಸ್. ಬಸನಗೌಡ್ರ, ಉಮೇಶ ಹಿರೇಮಠ, ಬಸವರಾಜ ಕೊರ್ಲಹಳ್ಳಿ, ಧನೇಶ ನಾಯ್ಕ, ವಿ.ಎಲ್. ಗಿಂಡಿಮಠ, ವಾಯ್.ಎಮ್. ಖಾಜಿ, ಎಚ್. ಆರ್. ಓಲೆಕಾರ, ಶಶಿಧರ ಕುರಿ, ಮಂಜುನಾಥ ತೆಗ್ಗಿನಮನಿ, ಸೇರಿದಂತೆ ಗದಗ ಜಿಲ್ಲೆಯ ಪಿಂಚಣಿ ವಂಚಿತ ನೌಕರರು ಉಪಸ್ಥಿತರಿದ್ದರು.

## ದೊಡ್ಡೂರ ಗ್ರಾ.ಪಂ ಅಧ್ಯಕ್ಷರಾಗಿ ಚಂದ್ರಶೇಖರ ಈಳಗೇರ ಆಯ್ಕೆ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ದೊಡ್ಡೂರ ಗ್ರಾ.ಪಂ ಅಧ್ಯಕ್ಷ ಮತ್ತು ಉಪಾಧ್ಯಕ್ಷ ಸ್ಥಾನಕ್ಕೆ ಶುಕ್ರವಾರ ನಡೆದ ಚುನಾವಣೆಯಲ್ಲಿ ಚಂದ್ರಶೇಖರ ಈಳಗೇರ ಅಧ್ಯಕ್ಷರಾಗಿ ಹಾಗೂ ಸುಶೀಲಾ ಲಮಾಣಿ ಉಪಾಧ್ಯಕ್ಷರಾಗಿ ಆಯ್ಕೆಯಾಗಿದ್ದಾರೆ.

ಒಟ್ಟು 15 ಸದಸ್ಯರನ್ನು ಹೊಂದಿರುವ ದೊಡ್ಡೂರ ಗ್ರಾ.ಪಂ ಚುನಾವಣೆ ಪ್ರಕ್ರಿಯೆಯಲ್ಲಿ 12 ಜನ ಸದಸ್ಯರು ಭಾಗವಹಿಸಿದ್ದರು. ಅಧ್ಯಕ್ಷ ಸ್ಥಾನಕ್ಕೆ ಚಂದ್ರಶೇಖರ ಈಳಗೇರ ಹಾಗೂ ಮಧುಮತಿ ಈಳಗೇರ ಅವರು ಸ್ಪರ್ಧಿಸಿದ್ದರು. ಚಂದ್ರಶೇಖರ



ಈಳಗೇರ 10 ಮತ ಪಡೆದು ಅಧ್ಯಕ್ಷರಾಗಿ ಆಯ್ಕೆಯಾದರೆ, ಮಧುಮತಿ ಈಳಗೇರ ಅವರು ಕೇವಲ 2 ಮತ ಪಡೆದು ಪರಾಭವ ಅನುಭವಿಸಿದರು.

ಉಪಾಧ್ಯಕ್ಷ ಸ್ಥಾನಕ್ಕೆ ಸುಶೀಲಾ ಲಮಾಣಿ ಹಾಗೂ ಇಂದ್ರವ್ವ ಲಮಾಣಿ ಸ್ಪರ್ಧಿಸಿದ್ದು, ಸುಶೀಲಾ ಲಮಾಣಿ 9 ಮತ ಪಡೆದು ಉಪಾಧ್ಯಕ್ಷ ಸ್ಥಾನಕ್ಕೆ ಆಯ್ಕೆಯಾದರೆ, ಪ್ರತಿಸ್ಪರ್ಧಿ ಕೇವಲ 3 ಮತ ಪಡೆದರು. ಚುನಾವಣಾಧಿಕಾರಿಯಾಗಿ ತಾ.ಪಂ ಇಓ ಕೃಷ್ಣಪ್ಪ ಧರ್ಮರ ಕಾರ್ಯನಿರ್ವಹಿಸಿದರು. ಈ ವೇಳೆ ಬಿ.ಎಸ್. ಈಳಗೇರ, ಕೃಷ್ಣಾ ಲಮಾಣಿ, ಅಮರಪ್ಪ ಗುಡಗುಂಟಿ, ಪುಂಡಲೀಕ ಲಮಾಣಿ ಸೇರಿ ಸದಸ್ಯರು ಇದ್ದರು.

## ದ್ರಾಕ್ಷಾರಸ ನಿಗಮ ಮಂಡಳಿ ಮಾಜಿ ಅಧ್ಯಕ್ಷ ಕಾಂತಿಲಾಲ್ ಬನ್ಸಾಲಿ ನಿಧನ

■ವಿಜಯಸಾಕ್ಷಿ ಸುದ್ದಿ, ಗದಗ

ಬಿ.ಎಸ್.ಯಡಿಯೂರಪ್ಪ ಆಪ್ತರೆಂದೇ ಗುರುತಿಸಿಕೊಂಡಿದ್ದ ಗದಗ ಜಿಲ್ಲೆಯ ಬಿಜೆಪಿ ಪಕ್ಷದ ಪ್ರಥಮ ಜಿಲ್ಲಾಧ್ಯಕ್ಷ ಹಾಗೂ ದ್ರಾಕ್ಷಾರಸ ನಿಗಮ ಮಂಡಳಿಯ ಮಾಜಿ ಅಧ್ಯಕ್ಷ ಕಾಂತಿಲಾಲ್ ಬನ್ಸಾಲಿ (66) ಶನಿವಾರ ಮಧ್ಯಾಹ್ನ ಹೃದಯಾಘಾತದಿಂದ ನಿಧನರಾದರು.

ಬಿಜೆಪಿ ಪಕ್ಷದಲ್ಲಿ ಹಿರಿಯರು ಹಾಗೂ ಅನುಭವಿ ರಾಜಕಾರಣಿ ಕಾಂತಿಲಾಲ್ ಬನ್ಸಾಲಿ



ಅವರು ಬಿಜೆಪಿ ರಾಷ್ಟ್ರೀಯ ಪರಿಷತ್ ಸದಸ್ಯರಾಗಿ, ರಾಜ್ಯ ಕಾರ್ಯಕಾರಿಣಿ ಸದಸ್ಯರಾಗಿ ಮತ್ತು ಜಿಲ್ಲಾ ಕೋರ್ ಕಮೀಟಿ ಸದಸ್ಯರಾಗಿ ಪಕ್ಷದಲ್ಲಿ ಸಕ್ರಿಯವಾಗಿ ತಮ್ಮದೇ ಆದ ಸೇವೆ ಸಲ್ಲಿಸಿದ್ದರು.

ಗದಗ ಜಿಲ್ಲೆಯಾದ ತಕ್ಷಣ ಬಿಜೆಪಿ ಪಕ್ಷದ ಪ್ರಥಮ ಜಿಲ್ಲಾಧ್ಯಕ್ಷರಾಗಿ ಎರಡು ಅವಧಿಗೆ ಸೇವೆ ಸಲ್ಲಿಸಿದ್ದರು.

ಜೊತೆಗೆ ಪಕ್ಷದ ವಿವಿಧ ಹುದ್ದೆಗಳಲ್ಲಿ ಕಾರ್ಯ ನಿರ್ವಹಿಸುವ ಮೂಲಕ ಬಿಜೆಪಿ ಪಕ್ಷಕ್ಕೆ ತಮ್ಮದೇ ಆದ ಕೊಡುಗೆ ನೀಡಿದ್ದರು.

ಬನ್ಸಾಲಿ ಅವರ ನಿಧನಕ್ಕೆ ಬಿಜೆಪಿ ಮುಖಂಡ ಅನಿಲ ಮೆಣಸಿನಕಾಯಿ ಸೇರಿದಂತೆ ಪಕ್ಷದ ಮುಖಂಡರು ಹಾಗೂ ಅಪಾರ ಕಾರ್ಯಕರ್ತರು ಕಂಬನಿ ಮಿಡಿದಿದ್ದಾರೆ.

# ರಾಜ್ಯ ಮಟ್ಟದ ಭಜನಾ ಸ್ಪರ್ಧೆ ಇಂದು

■ ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

ಇಲ್ಲಿಯ ಸಮೀಪದ ಹರ್ಲಾಪೂರ ಗ್ರಾಮದ ಕೊಟ್ಟೂರೇಶ್ವರ ಮಠದ ಮಹಾ ಕಾರ್ತಿಕೋತ್ಸವ ಹಾಗೂ ನಮ್ಮೂರ ಲಕ್ಷ ದೀಪೋತ್ಸವದಂಗವಾಗಿ ಕೊಟ್ಟೂರೇಶ್ವರ ಭಜನಾ ಸಂಘದ ಆಶ್ರಯದಲ್ಲಿ ಡಿ.15ರಂದು ಸಂಜೆ 5ಕ್ಕೆ ರಾಜ್ಯ ಮಟ್ಟದ ಹೊನಲು ಬೆಳಕಿನ ಭಜನಾ ಸ್ಪರ್ಧೆ ಕಾರ್ಯಕ್ರಮ ಜರುಗಲಿದೆ. ಕೊಟ್ಟೂರೇಶ್ವರ ಮಠದ ಡಾ. ಕೊಟ್ಟೂರೇಶ್ವರ ಮಹಾಸ್ವಾಮಿಗಳು ಸಾನ್ನಿಧ್ಯ ವಹಿಸುವರು. ಗ್ರಾಮದ ಫಕೀರಯ್ಯ ಸ್ವಾಮಿಗಳು ನೇತೃತ್ವದಲ್ಲಿ ಕನ್ನಡ ಮತ್ತು ಸಂಸ್ಕೃ ಇಲಾಖೆಯ ಸಹಾಯಕ ನಿರ್ದೇಶಕ ವೀರಯ್ಯಸ್ವಾಮಿ ಬಿ ಅವರು ಸ್ಪರ್ಧೆಯನ್ನು ಉದ್ಘಾಟಿಸಲಿದ್ದಾರೆ. ಗ್ರಾಮ ಪಂಚಾಯಿತಿ ಅಧ್ಯಕ್ಷೆ ರೇಣುಕಾ ವಡ್ಡರ ಅಧ್ಯಕ್ಷತೆ ವಹಿಸುವರು. ಸಂಗೀತ ಕಲಾವಿದರಾದ ಕೆ.ಬಿ. ವೀರಾಪೂರ, ಮಂಜುನಾಥ ಅರ್ಕಸಾಲಿ ಮುಖ್ಯ ಅಥಿತಿಗಳಾಗಿ ಪಾಲ್ಗೊಳ್ಳುವರು. ನಾಗರಾಜಗೌಡ ಗೌಡ್ರ, ಮಾಜಿ ಸೈನಿಕ ಮಹಾಂತೇಶ ಲಕ್ಕುಂಡಿ, ಶಿಕ್ಷಕ ಶಿವಕುಮಾರಸ್ವಾಮಿ ಮಜ್ಜಿಗುಡ್ಡ, ಗವಿಶಿದ್ದಪ್ಪ ಅಳವುಂಡಿ, ಬಸಮ್ಮ ಜಮಲಿಂಗಪ್ಪನವರ, ಅಡಿವೆಪ್ಪ ಗೌಡಪ್ಪನವರ, ಸಿದ್ಧಲಿಂಗೇಶ ಯಾಳವಾಡ, ವೆಂಕಟೇಶ ಜುಂಜಣ್ಣಿ, ಮಲಕಾಜಪ್ಪ ಯಾಳವಾಡ, ರಾಮಣ್ಣ ಬೆಳಧಡಿ ಹುಚ್ಚೀರಯ್ಯ ಹಿರೇಮಠ, ಲಲಿತಮ್ಮ ಮೇಗೇರಿ, ಅನ್ನಪೂರ್ಣಮ್ಮ ಯಲಿಗಾರ ಅಥಿತಿಗಳಾಗಿ ಭಾಗವಹಿಸಲಿದ್ದಾರೆ ಎಂದು ಭಜನಾ ಸಂಘದ ಪ್ರಕಟಣೆ ತಿಳಿಸಿದೆ.

ಸೋಶಿಯಲ್ ಡೆಮಾಕ್ರಟಿಕ್ ಪಾರ್ಟಿ ಆಫ್ ಇಂಡಿಯಾ ವತಿಯಿಂದ ಗದಗನಲ್ಲಿ ಬೃಹತ್ ಸಮಾವೇಶ

# ಒಳ ಮೀಸಲಾತಿಯನ್ನು ಕೂಡಲೇ ಜಾರಿಗೊಳಿಸಿ

■ ವಿಜಯಸಾಕ್ಷಿ ಸುದ್ದಿ, ಗದಗ

ಸಾಮಾಜಿಕ ನ್ಯಾಯಕ್ಕಾಗಿ ಒತ್ತಾಯಿಸಿ ಸೋಶಿಯಲ್ ಡೆಮಾಕ್ರಟಿಕ್ ಪಾರ್ಟಿ ಆಫ್ ಇಂಡಿಯಾ ರಾಜ್ಯ ಪ್ರಧಾನ ಕಾರ್ಯದರ್ಶಿ ಬಿ.ಆರ್. ಭಾಸ್ಕರ್ ಪ್ರಸಾದ್ ಅವರ ನೇತೃತ್ವದಲ್ಲಿ ನಡೆಯುತ್ತಿರುವ ಚಲೋ ಬೆಳಗಾವಿ-ಅಂಬೇಡ್ಕರ್ ಜಾಥಾ-2 ಗದಗ ನಗರದ ಮುಳಗುಂದ ನಾಕಾದಲ್ಲಿ ಬೃಹತ್ ಸಮಾವೇಶ ನಡೆಸಿತು.

ರಾಜ್ಯ ಪ್ರಧಾನ ಕಾರ್ಯದರ್ಶಿ ಅಪ್ಸರ ಕೋಡ್ಲುಪೇಟೆ ಮಾತನಾಡಿ, 25-26ನೇ ಸಾಲಿನ ಬಜೆಟ್‌ನಲ್ಲಿ ಅಲ್ಪಸಂಖ್ಯಾತರ ಕಲ್ಯಾಣಕ್ಕೆ 10 ಸಾವಿರ ಕೋಟಿ ಮೀಸಲಿಡಬೇಕು. ಖಾಸಗಿ ವಲಯದಲ್ಲಿ ಮೀಸಲಾತಿ ಕಲ್ಪಿಸಬೇಕು ಎಂದು ಹೇಳಿದರು. ಜಾಥಾದ ಸಂಚಾಲಕ, ರಾಜ್ಯ ಪ್ರಧಾನ ಕಾರ್ಯದರ್ಶಿ ಬಿ.ಆರ್. ಭಾಸ್ಕರ್ ಪ್ರಸಾದ್ ಮಾತನಾಡಿ, ಪರಿಶಿಷ್ಟ ಜಾತಿಗಳ ಒಳ ಮೀಸಲಾತಿಯನ್ನು ಕೂಡಲೇ ಜಾರಿಗೊಳಿಸಬೇಕು. ಮುಸ್ಲಿಮರ 2ಬಿ ಮೀಸಲಾತಿಯನ್ನು ಪುನಃಸ್ಥಾಪಿಸಿ ಶೇಕಡಾ 8ಕ್ಕೆ ಏರಿಸಬೇಕು. ಕಾಂತರಾಜ್ ಆಯೋಗದ ವರದಿಯನ್ನು ಜಾರಿಗೊಳಿಸಬೇಕು. ಬಿಜೆಪಿ ಸರ್ಕಾರ ಸಂವಿಧಾನ ವಿರೋಧಿಯಾಗಿ ಜಾರಿಗೆ ತರಲು ಹೊರಟಿರುವ ವಕ್ಫ್ ತಿದ್ದುಪಡಿ ಮಸೂದೆಯನ್ನು ಜಾರಿಗೊಳಿಸಬಾರದೆನ್ನುವ ನಿರ್ಣಯವನ್ನು ಸದನದಲ್ಲಿ ಕೈಗೊಳ್ಳಬೇಕು. ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಅಭಿವೃದ್ಧಿಗೆ ಮೀಸಲಿರುವ ಖಅಕ/ಖಿಖಕ ಹಣವನ್ನು ಬೇರೆ ಯಾವುದೇ ಯೋಜನೆಗಳಿಗೆ ಬಳಸಬಾರದು ಎಂದು ಆಗ್ರಹಿಸಿದರು.

ರಾಜ್ಯ ಕಾರ್ಯದರ್ಶಿ ಅಂಗಡಿ ಚಂದ್ರು ಕ್ರಾಂತಿ ಗೀತೆ ಹೇಳಿದರು. ರಾಜ್ಯ ಕಾರ್ಯದರ್ಶಿ ರಿಯಾಜ್ ಕಡಂಬು ಪ್ರಾಸ್ತಾವಿಕವಾಗಿ ಮಾತಾಡಿ ಸ್ವಾಗತಿಸಿದರು. ಇನ್ನೋರ್ವ ರಾಜ್ಯ ಕಾರ್ಯದರ್ಶಿ ರಂಜಾನ ಕಡಿವಾಳ ಕಾರ್ಯಕ್ರಮ ನಿರ್ವಹಿಸಿದರು. ಅಧ್ಯಕ್ಷಬಿಲಾಲ್ ಗೋಕಾವಿ ವಂದಿಸಿದರು. ರಾಜ್ಯ ಕೋಶಾಧಿಕಾರಿ ಅಮ್ಜದ್ ಖಾನ್, ಜಿಲ್ಲಾ ಉಪಾಧ್ಯಕ್ಷ ಹಿದಾಯತುಲ್ಲಾ ಕಾಗದಗಾರ, ಪ್ರಧಾನ ಕಾರ್ಯದರ್ಶಿ ಅನ್ವರ್ ಬಾಗೇವಾಡಿ, ಅಫ್ಘಾನ್, ಹಸನ ನಾಗನೂರ್, ದಾವಲ್ ರಾಜೇಖಾನ್, ಇಸ್ಮಾಯಿಲ್ ನದಾಫ್, ಅಬ್ದುಲ್ ಕಾಗದಗಾರ, ಮುಸ್ತಾಕ್ ಕಟ್ಟಿಮನಿ, ಮುಸ್ತಾಕ್ ಹೊಸಮನಿ, ಅನ್ವರ್ ಮುಲ್ಲಾ, ಮುಂತಾದ ದಲಿತಪರ ಹೋರಾಟಗಾರರು, ಸಾಮಾಜಿಕ ಹೋರಾಟಗಾರರು, ಕಾರ್ಯಕರ್ತರು, ಮಹಿಳೆಯರು ಸಮಾವೇಶದಲ್ಲಿ ಪಾಲ್ಗೊಂಡಿದ್ದರು.



ಜಿಲ್ಲಾ ಅಧ್ಯಕ್ಷ ಬಿಲಾಲ್ ಗೋಕಾವಿ ಅವರ ಅಧ್ಯಕ್ಷತೆಯಲ್ಲಿ ನಡೆದ ಹೋರಾಟದ ಸಭೆಯನ್ನು ಉದ್ದೇಶಿಸಿ ರಾಜ್ಯಾಧ್ಯಕ್ಷ ಅಬ್ದುಲ್ ಮಜೀದ್ ಮಾತನಾಡಿ, ರಾಜ್ಯ ಸರ್ಕಾರ ಮುಸ್ಲಿಮರ 2ಬಿ ಮೀಸಲಾತಿ ಮರುಸ್ಥಾಪಿಸಿ ಶೇ.8ಕ್ಕೆ ಏರಿಸಬೇಕು ಎಂದು ಒತ್ತಾಯಿಸಿದರು.

ಶ್ರೀ ಸ್ವಾಮಿ ವಿವೇಕಾನಂದರ ಜನ್ಮದಿನೋತ್ಸವ ಪ್ರಯುಕ್ತ

# ರಾಜ್ಯ ಯೋಗಾಸನ ಸ್ಪೋರ್ಟ್ಸ್ ಲೀಗ್ ಸ್ಪರ್ಧೆಗಳು

■ ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ರಾಜ್ಯ ಅಮೆಚೂರ್ ಯೋಗ ಸ್ಪೋರ್ಟ್ಸ್ ಅಸೋಸಿಯೇಶನ್ ಬೆಂಗಳೂರು ಇವರು ಬೆಳಗಾವಿ ಜಿಲ್ಲೆಯ ಗೋಕಾಕದ ಶ್ರೀ ವಿವೇಕಾನಂದ ಯೋಗ ಮತ್ತು ಸಂಸ್ಕೃತಿ ವಿಕಾಸ ಸಂಘ ಹಾಗೂ ಬೆಳಗಾವಿ ಜಿಲ್ಲಾ ಯೋಗಾಸನ ಸ್ಪೋರ್ಟ್ಸ್ ಅಸೋಸಿಯೇಶನ್ ಇವರುಗಳ ಸಹಯೋಗದಲ್ಲಿ ಶ್ರೀ ಸ್ವಾಮಿ ವಿವೇಕಾನಂದರ ಜನ್ಮದಿನೋತ್ಸವ ಪ್ರಯುಕ್ತ 3ನೇ ಕರ್ನಾಟಕ ರಾಜ್ಯ ಯೋಗಾಸನ ಸ್ಪೋರ್ಟ್ಸ್ ಲೀಗ್ ಸ್ಪರ್ಧೆಗಳನ್ನು ಆಯೋಜಿಸಿದ್ದಾರೆ.

ಸ್ಪರ್ಧೆಗಳು 2025ರ ಜನವರಿ 12ರ ಬೆಳಿಗ್ಗೆ 8 ಗಂಟೆಗೆ ಎಚ್.ಕೆ.ಜಿ.ಎನ್. ಕಲ್ಯಾಣ ಮಂಟಪ ಗೋಕಾಕದಲ್ಲಿ ನಡೆಯಲಿವೆ. ಸ್ಪರ್ಧೆಗಳು ಸ್ಪರ್ಧಿಗಳ ವಯೋಮಿತಿ ಆಧಾರ ಮೇರೆಗೆ ನಡೆಯಲಿವೆ. 8ರಿಂದ 60 ವರ್ಷಕ್ಕೂ ಮೇಟಲ್ಪಟ್ಟ ಸ್ತ್ರೀ-ಪುರುಷರು ಸ್ಪರ್ಧೆಯಲ್ಲಿ ಭಾಗಹಿಸಲು ಅವಕಾಶವಿದ್ದು, ಸ್ಪರ್ಧೆಗಳು ಸ್ತ್ರೀ-ಪುರುಷರಿಗಾಗಿ ಪ್ರತ್ಯೇಕವಾಗಿ ನಡೆಯುವವು.

ಸ್ಪರ್ಧಾ ವೇಳೆಯಲ್ಲಿ ಸಂಘಟಕರು ಸ್ಪರ್ಧೆಯ ಪಠ್ಯಕ್ರಮದಲ್ಲಿ ತಿಳಿಸಿರುವ ವೃಕ್ಷಾಸನ, ಗೋಮುಖಾಸನ, ಉಷ್ಟ್ರಾಸನ, ಮತ್ಸ್ಯಾಸನ, ಪಶ್ಚಿಮೋತ್ತಾನಾಸನ, ಧನುರಾಸನ, ಶಲಭಾಸನ, ಸರ್ವಾಂಗಾಸನ, ಅರ್ಧಮತ್ಸ್ಯೇಂದ್ರಾಸನ, ತ್ರಿಕೋಣಾಸನ ಈ 10 ಆಸನಗಳಲ್ಲಿ ತಮಗಿಷ್ಟವಾದ 5 ಆಸನಗಳನ್ನು ಸ್ಪರ್ಧಿಗಳು ಪ್ರದರ್ಶಿಸಬೇಕು ಪ್ರದರ್ಶಿಸುವಾಗ ಪ್ರತಿ ಆಸನದ ಅಂತಿಮ ಸ್ಥಿತಿಯಲ್ಲಿ 15 ಸೆಕೆಂಡ್‌ಗಳ ಕಾಲ ಸ್ಥಿರವಾಗಿರಬೇಕು. ಯೋಗಾಸನ ಸ್ಪರ್ಧಾ ಪ್ರದರ್ಶನದ ವೇಳೆಯಲ್ಲಿ ಸ್ಪರ್ಧಾರ್ಥಿಗಳು ಸ್ಪರ್ಧೆಗೆ ಬೇಕಾದ ಅನುಕೂಲಕರ ವಸ್ತ್ರ ಧರಿಸಿರಬೇಕು.

ಸ್ಪರ್ಧೆಯಲ್ಲಿ ವಿಜೇತರಾದವರಿಗೆ ಮೆಡಲ್ ಮತ್ತು ಪ್ರಶಸ್ತಿಪತ್ರ ಹಾಗೂ ಭಾಗವಹಿಸದವರೆಲ್ಲರಿಗೂ ಪ್ರಮಾಣಪತ್ರಗಳನ್ನು ನೀಡಲಾಗುವುದು. ಸ್ಪರ್ಧೆಯ ದಿನ ಸ್ಪರ್ಧಿಗಳಿಗೆಲ್ಲರಿಗೂ ಬೆಳಗಿನ ಉಪಹಾರ ಮತ್ತು ಮಧ್ಯಾಹ್ನದ ಊಟದ ವ್ಯವಸ್ಥೆ ಇರುವದು. ದೂರಿಂದ ಬರುವ ಸ್ಪರ್ಧಿಗಳಿಗೆ ಸ್ಪರ್ಧೆಯ ಮುನ್ನಾ ದಿನ ವಸತಿ ವ್ಯವಸ್ಥೆ ಕಲ್ಪಿಸಲಾಗಿದೆ. ಸ್ಪರ್ಧೆಗಳಲ್ಲಿ ಭಾಗವಹಿಸಲು ಪ್ರತಿ ಸ್ಪರ್ಧಿಗೆ ಪ್ರವೇಶ ಫೀ ರೂ. 400/- ಔಟಿಟಿಟುಟಿಜ ಮೂಲಕ ಪ್ರವೇಶ ಪಡೆಯಬೇಕು. ಪ್ರವೇಶ ಪಡೆಯಲು ಉಠಂರಟಜ ಟುಟಿಞ : **https:/foms.gle/TxpeJhqfhL2Rsw7g7**

ಹೆಚ್ಚಿನ ಮಾಹಿತಿ ಪಡೆಯಲು ಸಂಪರ್ಕಿಸಬೇಕಾದ ದೂರವಾಣಿ ಸಂಖ್ಯೆ-9844442701, 9980572709, 9448317188. ಯೋಗಾಸನ ಕ್ರೀಡಾಸಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ ಗದಗ ಜಿಲ್ಲಾ ಅಮೆಚೂರ್ ಯೋಗ ಸ್ಪೋರ್ಟ್ಸ್ ಅಸೋಸಿಯೇಶನ್ ಅಧ್ಯಕ್ಷ ಕೆ.ಎಸ್. ಪಲ್ಲೇದ ಪತ್ರಿಕಾ ಪ್ರಕಟಣೆ ಮೂಲಕ ವಿನಂತಿಸಿದ್ದಾರೆ.



# ಸಮಸ್ಯೆ ತಿಳಿದು ಆರೈಕೆ ನೀಡಿ




■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಶ್ರೀ ಸೋಮೇಶ್ವರ ಸ್ಪಿನಿಂಗ್ ಮಿಲ್ ಆವರಣದಲ್ಲಿರುವ ಅರಳು ವಿಶೇಷ ಅಗತ್ಯತೆಯುಳ್ಳ ಬುದ್ಧಿಮಾಂದ್ಯ ಮಕ್ಕಳ ವಸತಿರಹಿತ ಶಾಲೆಯ ಮಕ್ಕಳಿಗೆ ಶನಿವಾರ ಉಚಿತ ವಿಶೇಷ ಆರೋಗ್ಯ ತಪಾಸಣೆ ಶಿಬಿರವನ್ನು ಹಮ್ಮಿಕೊಳ್ಳಲಾಗಿತ್ತು.


ಹುಬ್ಬಳ್ಳಿ ರೌಂಡ್ ಟೇಬಲ್ 35 ಹಾಗೂ ಹುಬ್ಬಳ್ಳಿ ಲೇಡೀಸ್ ಸರ್ಕಲ್ 45 ಇವರ ಸಹಯೋಗದೊಂದಿಗೆ ಈ ಉಚಿತ ಆರೋಗ್ಯ ತಪಾಸಣಾ ಶಿಬಿರವನ್ನು ಹಮ್ಮಿಕೊಳ್ಳಲಾಯಿತು. ಕಾರ್ಯಕ್ರಮದಲ್ಲಿ ಮಕ್ಕಳ ನರರೋಗ ತಜ್ಞ ಡಾ. ರಾಘವೇಂದ್ರ ಅಮೋಘಿಮಠ ಮಾತನಾಡಿ, ಮಗುವಿನ ಜನನದ ನಂತರ ಅವುಗಳಿಗೆ ಇರುವ ಸಣ್ಣ ಪುಟ್ಟ ದೋಷಗಳನ್ನು ನಿವಾರಿಸುವ ನಿಟ್ಟಿನಲ್ಲಿ ತಜ್ಞ ವೈದ್ಯರನ್ನು ಭೇಟಿ ಮಾಡಿ ಆರಂಭದ ಹಂತದಲ್ಲಿಯೇ ಅವುಗಳನ್ನು ನಿಯಂತ್ರಿಸಬಹುದಾಗಿದೆ. ನರಗಳ ಸರಿಯಾದ ಬೆಳವಣಿಗೆಯಾಗದೆ ಇರುವ ಹಿನ್ನೆಲೆಯಲ್ಲಿ ಬುದ್ಧಿಮಾಂದ್ಯತೆ ಉಂಟಾಗಬಹುದು. ಇವುಗಳಿಗೆ ಸರಿಯಾದ ಚಿಕಿತ್ಸೆ ದೊರೆತಲ್ಲಿ ಮಕ್ಕಳು ಸುಧಾರಣೆ ಕಾಣುತ್ತಾರೆ.

ಬುದ್ಧಿಮಾಂದ್ಯ ಮಕ್ಕಳಲ್ಲಿ ವಿಶೇಷ ಅಗತ್ಯತೆಯುಳ್ಳ ಮಕ್ಕಳು ಹೆಚ್ಚು ಸಮಸ್ಯೆಗಳನ್ನು ಎದುರಿಸುತ್ತಿರುತ್ತಾರೆ. ಅವರಲ್ಲಿರುವ ಸಮಸ್ಯೆಗಳನ್ನು ತಿಳಿದುಕೊಂಡು ಆರೈಕೆ ದೊರಕಿಸಿದಲ್ಲಿ ಹಂತ ಹಂತವಾಗಿ ಸ್ವಲ್ಪಮಟ್ಟಿನ ಸುಧಾರಣೆ ಕಾಣಲು ಸಾಧ್ಯವಾಗುತ್ತದೆ ಎಂದು ಹೇಳಿದರು.

ಸಂಸ್ಥೆಯ ಕಾರ್ಯದರ್ಶಿ ಹಾಗೂ ಮುಖ್ಯೋಪಾಧ್ಯಾಯೆ ನೀಲಮ್ಮ ದಾಸಪ್ಪನವರ ಪ್ರಾಸ್ತಾವಿಕವಾಗಿ ಮಾತನಾಡಿ, ಸಂಸ್ಥೆ ನಡೆದುಬಂದ ದಾರಿಯನ್ನು ವಿವರಿಸಿದರು. ಶಿಬಿರದಲ್ಲಿ ದಂತ ವೈದ್ಯರಾದ ಡಾ. ಜೆನ್ನಿ, ಡಾ. ಅರ್ಚನಾ, ಕಿಶನ್‌ಅಭಿದ್, ಈಶ್ವರ, ಲಿಂಗರಾಜ ಪುಟ್ಟಣ್ಣವರ, ವಿಶೇಷ ಶಿಕ್ಷಕರಾದ ಲಲಿತಾ ದಾಸಪ್ಪನವರ, ನೇತ್ರಾ, ಪ್ರಶಾಂತ ಎಸ್‌ಬಿ, ಅಕ್ಕಮ್ಮ ಕೊರದಾಳ, ಹೇಮಾವತಿ ಅಣ್ಣಿಗೇರಿ ಸಿಬ್ಬಂದಿಗಳು ಹಾಜರಿದ್ದರು. 57 ವಿಶೇಷ ಮಕ್ಕಳು ಹಾಗೂ ಪಾಲಕರು ಶಿಬಿರದ ಲಾಭ ಪಡೆದರು.

# ಮಾದಾರ ಚೆನ್ನಯ್ಯನವರ ಜಯಂತಿ ಕುರಿತು ಉಪನ್ಯಾಸ

■ ವಿಜಯಸಾಕ್ಷಿ ಸುದ್ದಿ, ಗದಗ



ಇಲ್ಲಿನ ಶಿವಾನಂದ ನಗರದ ಬಸವ ಸಮುದಾಯ ಭವನದಲ್ಲಿ ಡಿ.15ರ ಬೆಳಿಗ್ಗೆ 11ಕ್ಕೆ ನಡೆಯಲಿರುವ ಬಸವದಳದ 1624ನೇ ಶರಣ ಸಂಗಮದಲ್ಲಿ ಶರಣ ಮಾದಾರ ಚೆನ್ನಯ್ಯನವರ ಜಯಂತಿ ಕುರಿತು ಉಪನ್ಯಾಸ ಹಾಗೂ ಶರಣೆ ಮುಕ್ತಾಯಕ್ಕನವರ ವಚನ ಚಿಂತನೆ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

ಅಧ್ಯಕ್ಷತೆಯನ್ನು ಬಸವದಳದ ಅಧ್ಯಕ್ಷ ಶರಣ ವಿ.ಕೆ. ಕರೇಗೌಡ್ರ ವಹಿಸುವರು. ಶರಣತತ್ವ ಚಿಂತಕ, ಶರಣ ಎಂ.ಬಿ. ಲಿಂಗದಾಳ ವಚನ ಚಿಂತನೆ ಮಾಡುವರು. ಡಿ.ಸಿ. ಪಾವಟೆ ಶಿಕ್ಷಣ ಮಹಾವಿದ್ಯಾಲಯದ ಕನ್ನಡ ಪ್ರಾಧ್ಯಾಪಕಿ ಶರಣೆ ಡಾ. ಗಿರಿಜಾ ಹಸಬಿ ಉಪನ್ಯಾಸ ಮಾಡುವರು.

ಕಾರಣ ಬಸವದಳದ ಸದಸ್ಯರು, ಶರಣ ಸಾಹಿತ್ಯಾಭಿಮಾನಿಗಳು ಹಾಗೂ ಆಸಕ್ತರು ಭಾಗವಹಿಸಬೇಕೆಂದು ಸಂಘಟಕರ ಪರವಾಗಿ ಪ್ರಕಾಶ ಅಸುಂಡಿಯವರು ವಿನಂತಿಸಿದ್ದಾರೆ.

ಶ್ರೀ ದತ್ತ ಜಯಂತಿ ಕಾರ್ಯಕ್ರಮದಲ್ಲಿ ಸುಹಾಸ ಕುಲಕರ್ಣಿ ಅಭಿಮತ

# ಬೇಡಿದ್ದನ್ನು ನೀಡುವ ಭಗವಂತ ದತ್ತಾತ್ರೇಯ

■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ನಾವು ಬೇಡಿದ್ದನ್ನು ನೀಡುವ ಭಗವಂತ ಯಾರಾದರೂ ಇದ್ದರೆ ಅದು ದತ್ತ ಮಹಾರಾಜರು ಮಾತ್ರ. ದತ್ತಾತ್ರೇಯನನ್ನು ಅನನ್ಯ ಭಾವದಿಂದ ಪೂಜಿಸಿದರೆ ನಮ್ಮ ಇಷ್ಟಗಳೆಲ್ಲವೂ ನೆರವೇರುತ್ತವೆ ಎಂದು ಸುಹಾಸ ಕುಲಕರ್ಣಿ ಹೇಳಿದರು.

ಪಟ್ಟಣದ ಶ್ರೀ ದತ್ತಾತ್ರೇಯ ದೇವಸ್ಥಾನದಲ್ಲಿ ಬ್ರಹ್ಮ ಸಮಾಜದವರು ಶನಿವಾರ ಆಚರಿಸಿದ ಶ್ರೀ ದತ್ತ ಜಯಂತಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ದತ್ತಾತ್ರೇಯರು ಪೀಠಾಪುರದಲ್ಲಿ, ಕುರಗಡ್ಡಿಯಲ್ಲಿ, ಗಾಣಗಾಪುರದಲ್ಲಿ ತಮ್ಮ ಅವತಾರದ ಅನೇಕ ಲೀಲೆಗಳನ್ನು ತೋರಿದರು. ನಿತ್ಯವೂ ಯಾರು ಶ್ರೀ ಗುರು ಚರಿತ್ರೆಯನ್ನು ಪಠಿಸುತ್ತಾರೆಯೋ ಅವರ ಸಂಕಷ್ಟಗಳು ದೂರವಾಗುತ್ತವೆ. ಬ್ರಹ್ಮ, ವಿಷ್ಣು, ಮಹೇಶ್ವರರು ಒಟ್ಟಾಗಿರುವ ಅವತಾರವೇ ಶ್ರೀ ಗುರು ದತ್ತಾತ್ರೇಯನಾಗಿದ್ದಾನೆ. ಒಮ್ಮೆ ದತ್ತಾತ್ರೇಯನಿಗೆ ನಾವು ಶರಣು ಹೋದರೆ ಮೂವರಿಗೂ ನಾವು ಶರಣು ಹೋದಂತೆ. ಆದ್ದರಿಂದ ಶ್ರೀ ಗುರು ದತ್ತಾತ್ರೇಯನ ಪೂಜೆ ನಮಗೆ ಎಲ್ಲವನ್ನೂ ನೀಡುತ್ತದೆ ಎಂದು ಹೇಳಿದರು.

ಸುಮಂಗಲೆಯರು ಶ್ರೀ ಗುರು ದತ್ತಾತ್ರೇಯನನ್ನು ತೊಟ್ಟಿಲಲ್ಲಿ ಹಾಕಿ ಜೋಗುಳ ಹಾಡಿದರು. ಈ ಸಂದರ್ಭದಲ್ಲಿ ಎ.ಜಿ. ಕುಲಕರ್ಣಿ, ಶೇಷಗಿರಿ ಕುಲಕರ್ಣಿ, ಆನಂದ ಕುಲಕರ್ಣಿ, ಪ್ರಶಾಂತ ಗ್ರಾಮಪುರೋಹಿತ, ಆರ್.ಡಿ. ಕುಲಕರ್ಣಿ, ಬಿ.ಎಲ್. ಕುಲಕರ್ಣಿ, ಅಜಿತ ಕುಲಕರ್ಣಿ, ಪ್ರಕಾಶ ಕಾಳೆ, ಆರ್.ಡಿ. ಕುಲಕರ್ಣಿ, ಗಿರೀಶ ಕುಲಕರ್ಣಿ, ನಾಗರಾಜ ನಾಡಿಗೇರ, ನಾಗೇಶಭಟ್ಟ ಗ್ರಾಮಪುರೋಹಿತ, ಪ್ರಕಾಶ ಕಾಳೆ, ಜ್ಯೋತಿ ನಾಡಿಗೇರ, ರೂಪಾ ಗ್ರಾಮಪುರೋಹಿತ, ವಿಮಲಾಬಾಯಿ ಗ್ರಾಮಪುರೋಹಿತ, ಶೋಭಾ ಕುಲಕರ್ಣಿ, ವನಜಾಕ್ಷಿ ಕುಲಕರ್ಣಿ, ಪ್ರತೀಕ್ಷಾ ಕುಲಕರ್ಣಿ, ಶೋಭಾ ಸೂರಭಟ್ಟನವರ, ಶ್ರೇಯಾ ನಾಡಿಗೇರ, ಅರ್ಚನಾ ಕುಲಕರ್ಣಿ, ಲಕ್ಷ್ಮಿ ಗ್ರಾಮಪುರೋಹಿತ, ವಾಣಿ ಕುಲಕರ್ಣಿ, ಪರಿಮಳಾ ಗ್ರಾಮಪುರೋಹಿತ, ಸನ್ಮತಿ ಸದರಜೋಷಿ, ಜಯಶ್ರೀ ಗ್ರಾಮಪುರೋಹಿತ, ಪೂಜಾ ಗ್ರಾಮಪುರೋಹಿತ, ದೀಪಾ ಕುಲಕರ್ಣಿ, ಪ್ರಭಾ ರಾಯಭಟ್ಟನವರ, ಪ್ರಿಯಾ ಕುಲಕರ್ಣಿ, ಅನುಪಮಾ ಗ್ರಾಮಪುರೋಹಿತ ಮುಂತಾದವರಿದ್ದರು.



ದೇವಸ್ಥಾನದ ಅರ್ಚಕ ಶ್ರೀವಲ್ಲಭಭಟ್ಟ ಸದರಜೋಷಿ ಶ್ರೀ ಗುರು ದತ್ತಾತ್ರೇಯನ ಲೀಲೆಗಳನ್ನು ವಿವರಿಸಿ, ನರೇಗಲ್ಲದ ಶ್ರೀ ಗುರು ದತ್ತಾತ್ರೇಯನೂ ಸಹ ಭಕ್ತ ವತ್ಸಲನಾಗಿದ್ದು, ಭಕ್ತರ ಎಲ್ಲ ಅಭೀಷ್ಟೆಗಳನ್ನು ನೆರವೇರಿಸುವಲ್ಲಿ ಎಂದಿಗೂ ಮುಂಚೂಣಿಯಲ್ಲಿದ್ದಾನೆ ಎಂದರು.

ಅದ್ದೂರಿಯಾಗಿ ಜರುಗಿದ ಶ್ರೀ ದತ್ತಾತ್ರೇಯ ತೊಟ್ಟಿಲೋತ್ಸವ

# ದತ್ತಾತ್ರೇಯ ತ್ರಿಮೂರ್ತಿ ಸ್ವರೂಪಿ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಶಂಕರ ಭಾರತಿಮಠದಲ್ಲಿ ಬ್ರಹ್ಮವೃಂದ (ಬ್ರಾಹ್ಮಣ ಸಮಾಜ)ದ ವತಿಯಿಂದ ದತ್ತ ಜಯಂತಿ ಅಂಗವಾಗಿ ಕಳೆದ ಒಂದು ವಾರದಿಂದ ಅನೇಕ ಧಾರ್ಮಿಕ ಕಾರ್ಯಕ್ರಮಗಳು, ನಿತ್ಯ ಭಜನೆ, ರುದ್ರಾಭಿಷೇಕ, ವಿಶೇಷ ಅಲಂಕಾರಗಳನ್ನು ನೆರವೇರಿಸಲಾಯಿತು.

ಬಾಲಚಂದ್ರಶಾಸ್ತ್ರೀಗಳು ಹುಲಮನಿ ಅವರ ಮಾರ್ಗದರ್ಶನದಲ್ಲಿ ಶ್ರೀಕಾಂತ ಪೂಜಾರ ಗುರುಚರಿತ್ರೆ ಪಾರಾಯಣವನ್ನು ಮಾಡಿದರು. ಶನಿವಾರ ದತ್ತಾತ್ರೇಯ ತೊಟ್ಟಿಲೋತ್ಸವ ಕಾರ್ಯಕ್ರಮವನ್ನು ವಿಪ್ರ ಮಹಿಳಾ ಮಂಡಳದ ನೇತೃತ್ವದಲ್ಲಿ ಸಂಪ್ರದಾಯದಂತೆ ನೆರವೇರಿಸಲಾಯಿತು. ದೇವಸ್ಥಾನದ ಆವರಣದಲ್ಲಿ ಮಹಿಳೆಯರು ಸಡಗರ-ಸಂಭ್ರಮದಿಂದ ತೊಟ್ಟಿಲೋತ್ಸವ ಕಾರ್ಯಕ್ರಮವನ್ನು ನಡೆಸಿದರು. ಈ ಸಂದರ್ಭದಲ್ಲಿ ವೇ.ಮೂ. ಬಾಲಚಂದ್ರಶಾಸ್ತ್ರೀಗಳು ಹುಲಮನಿ ಮಾತನಾಡಿ, ದತ್ತಾತ್ರೇಯ ದೇವರನ್ನು ತ್ರಿದೇವನ ರೂಪವೆಂದು ಕರೆಯುವುದರ ಹಿಂದೆ ಪೌರಾಣಿಕ ಕಥೆಯಿದೆ. ದತ್ತಾತ್ರೇಯನ ಮೂರ್ತಿ ತ್ಯಾಗ, ಭಕ್ತಿ, ಜ್ಞಾನ, ಅನುಕಂಪಗಳ ಸಾಕಾರ ಮೂರ್ತಿಯಾಗಿದೆ. ಮಾರ್ಗಶಿರ ಮಾಸದಲ್ಲಿ ಬರುವ ಶುಕ್ಲಪಕ್ಷದ ಪೂರ್ಣಿಮೆ ದಿನದಂದು ದತ್ತಜಯಂತಿ ಆಚರಣೆ ಮಾಡಲಾಗುತ್ತದೆ.

ಬ್ರಹ್ಮ, ವಿಷ್ಣು ಮತ್ತು ಮಹೇಶ್ವರ ಅವತಾರ ತ್ರಿಮೂರ್ತಿ ಸ್ವರೂಪ ದತ್ತಾತ್ರೇಯ ಎಂದು ಕರೆಯಲ್ಪಡುತ್ತದೆ. ದತ್ತ ಜಯಂತಿಯಂದು ಪೂಜಾ ವಿಧಗಳನ್ನು ಮಾಡುವುದರಿಂದ ಜೀವನದ ಪ್ರತಿಯೊಂದು ಹಂತದಲ್ಲೂ ಪ್ರತಿಫಲವನ್ನು ಪಡೆಯಬಹುದು ಎಂದು ನುಡಿದರು.

ಕಾರ್ಯಕ್ರಮದಲ್ಲಿ ಬ್ರಾಹ್ಮಣ ಸಮಾಜದ ತಾಲೂಕಾಧ್ಯಕ್ಷ ಕೃಷ್ಣ ಕುಲಕರ್ಣಿ, ಕಾರ್ಯದರ್ಶಿ ಅರವಿಂದ ದೇಶಪಾಂಡೆ, ನಾರಾಯಣಭಟ್ ಪುರಾಣಿಕ, ಆರ್.ಎನ್. ಪಂಚಬಾವಿ, ದೃವ ಬೆಟಗೇರಿ, ಕೆ.ಎಸ್. ಕುಲಕರ್ಣಿ, ಅನಂತ ತೇಲಂಗ, ಕೃಷ್ಣಕುಮಾರ ಕುಲಕರ್ಣಿ, ಡಾ. ಪ್ರಸನ್ನ ಕುಲಕರ್ಣಿ, ಅನೂಜಾ ಪೂಜಾರ, ಮೀನಾಕ್ಷಿ ಸರದೇಶಪಾಂಡೆ, ವೀಣಾ ಪಡ್ನೀಸ್, ಮೇಘಾ ಸಾಹುಕಾರ, ಗಿರಿಜಾಬಾಯಿ ಕುಲಕರ್ಣಿ, ಕಮಲಾಬಾಯಿ ಪುರಾಣಿಕ, ಗೀತಾಬಾಯಿ ದೇಶಪಾಂಡೆ, ರಾಧಾ ಕುಲಕರ್ಣಿ, ಅಕ್ಷತಾ ಕುಲಕರ್ಣಿ, ಸೀಮಂತಿನಿ ಕುಲಕರ್ಣಿ, ನಯನಾ ಪೂಜಾರ, ಅಂಭುಜಾ ಬೆಟಗೇರಿ ಸೇರಿದಂತೆ ಅನೇಕರಿದ್ದರು.




ಬ್ರಾಹ್ಮಣ ಸಮಾಜದ ಹಿರಿಯ ಮುಖಂಡ ವಿ.ಎಲ್. ಪೂಜಾರ ಮತ್ತು ಬ್ರಹ್ಮವೃಂದದ ಅಧ್ಯಕ್ಷ ಗೋಪಾಲ ಪಡ್ನೀಸ್ ಮಾತನಾಡಿ, ದತ್ತಜಯಂತಿ ಕಾರ್ಯಕ್ರಮವು ಶ್ರೀಮಠದಲ್ಲಿ ಹಲವಾರು ವರ್ಷಗಳಿಂದ ನಿರಂತರವಾಗಿ ನಡೆದುಕೊಂಡು ಬರುತ್ತಿದ್ದು, ಹಿಂದಿನ ದಿನಗಳಲ್ಲಿ ಹಿರಿಯರು ದತ್ತಜಯಂತಿ ಪರಂಪರೆಯನ್ನು ಇಲ್ಲಿನ ಮಠದಲ್ಲಿ ಸಂಪ್ರದಾಯಬದ್ಧವಾಗಿ ಮಾಡುತ್ತಿದ್ದರು. ಅದನ್ನೇ ಈಗಲೂ ವ್ಯವಸ್ಥಿತವಾಗಿ ನಡೆಸಿಕೊಂಡು ಬರಲಾಗುತ್ತಿದೆ. ಸಮಾಜ ಬಾಂಧವರೊಂದಿಗೆ ಇತರೆ ಸಮಾಜದವರು ಸಹ ಈ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುತ್ತಿದ್ದಾರೆ. ಕಾರ್ಯಕ್ರಮಗಳ ಯಶಸ್ವಿಗೆ ಎಲ್ಲರ ಸಹಕಾರ ಅಗತ್ಯ ಎಂದು ಹೇಳಿದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka